Volume : 11 Issue : 138 ಪುಟ : 4+2 ಬೆಲೆ: 3.00 ಶುಕ್ರವಾರ ಜುಲೈ 3-2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 138 Pages : 4+2 Price : 3.00 Friday July 3-2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ವಚನಗಳನ್ನು ಓದುವುದಷ್ಟೇ ಅಲ್ಲ, ಬದುಕಿನಲ್ಲಿ ಅಳವಡಿಸಿಕೊಳ್ಳಿ: ಎಸ್.ವಿ. ಸಂಕನೂರ ಕರೆ

# ವಚನ ಸಾಮ್ರಾಜ್ಯ ಉಳಿಸಿದ ಮಹಾತ್ಮ ಫ.ಗು. ಹಳಕಟ್ಟಿ

**ವಿಜಯಸಾಕ್ಷಿ ಸುದ್ದಿ, ಗದಗ**

ಕೇವಲ ವಚನಗಳನ್ನು ಸಂಗ್ರಹಿಸಿದ ವ್ಯಕ್ತಿಯಾಗಿ ಅಲ್ಲ, ನಶಿಸಿಹೋಗುತ್ತಿದ್ದ ವಚನ ಸಾಹಿತ್ಯಕ್ಕೆ ಹೊಸ ಜೀವ ತುಂಬಿದ ಮಹಾನ್ ಸಂಶೋಧಕರಾಗಿ ಡಾ. ಫ.ಗು. ಹಳಕಟ್ಟಿಯವರನ್ನು ಸಮಾಜ ಸದಾ ಸ್ಮರಿಸಬೇಕು. ಅವರ ಆದರ್ಶಗಳು ಮತ್ತು ವಚನಗಳ ಸಂದೇಶಗಳು ಪ್ರತಿಯೊಬ್ಬರ ಬದುಕಿನ ದಾರಿದೀಪವಾಗಬೇಕು ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಹೇಳಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತವಾಗಿ ಗುರುವಾರ ಆಯೋಜಿಸಿದ್ದ 'ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ?2026' ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

12ನೇ ಶತಮಾನದಲ್ಲಿ ಶರಣರು ತಾಳೆಗರಿ ಮತ್ತು ಓಲೆಗರಿಗಳಲ್ಲಿ ಬರೆದಿಟ್ಟಿದ್ದ ವಚನಗಳು ಕಾಲಗರ್ಭದಲ್ಲಿ ಕಣ್ಮರೆಯಾಗುವ ಸ್ಥಿತಿಯಲ್ಲಿದ್ದಾಗ, ಊರೂರು ಅಲೆದು ಅವುಗಳನ್ನು ಸಂಗ್ರಹಿಸಿ ಉಳಿಸಿದ ಶ್ರೇಯಸ್ಸು ಹಳಕಟ್ಟಿಯವರಿಗೆ ಸಲ್ಲುತ್ತದೆ. ಇದೇ ಕಾರಣಕ್ಕೆ ಅವರನ್ನು 'ವಚನ ಪಿತಾಮಹ' ಎಂದು ಗೌರವಿಸಲಾಗುತ್ತಿದೆ.

ವಕೀಲಿ ವೃತ್ತಿಯನ್ನೇ ತ್ಯಜಿಸಿ ಸೈಕಲ್‌ನಲ್ಲಿ ಹಳ್ಳಿಹಳ್ಳಿಗೆ ಸಂಚರಿಸಿ ಸಾವಿರಾರು ವಚನಗಳನ್ನು ಸಂಗ್ರಹಿಸಿದ ಅವರು, ಸ್ವಂತ ಮುದ್ರಣಾಲಯ ಸ್ಥಾಪಿಸಿ ವಚನಗಳನ್ನು ಪುಸ್ತಕ ರೂಪದಲ್ಲಿ ಪ್ರಕಟಿಸಿದ ಮಹಾನ್ ಸಾಧಕರು ಎಂದು ಸಂಕನೂರ ಸ್ಮರಿಸಿದರು.

ಹಳಕಟ್ಟಿಯವರು ಸಾಹಿತ್ಯ ಕ್ಷೇತ್ರಕ್ಕೆ ಮಾತ್ರ ಸೀಮಿತರಾಗಿರಲಿಲ್ಲ. ವಿಜಯಪುರದಲ್ಲಿ ಲಿಂಗಾಯತ ವಿದ್ಯಾವರ್ಧಕ ಸಂಘ (ಬಿಎಲ್‌ಡಿಇ), ಸಿದ್ದೇಶ್ವರ ಬ್ಯಾಂಕ್ ಸೇರಿದಂತೆ ಹಲವು ಶೈಕ್ಷಣಿಕ, ಸಹಕಾರಿ ಸಂಸ್ಥೆಗಳನ್ನು ಕಟ್ಟುವ ಮೂಲಕ ಸಮಾಜದ ಅಭಿವೃದ್ಧಿಗೂ ಅಪಾರ ಕೊಡುಗೆ ನೀಡಿದ್ದಾರೆ. ಇಂದಿನ ಯುವಜನರು ವಚನಗಳನ್ನು ಓದುವುದಷ್ಟೇ ಅಲ್ಲ, ಬದುಕಿನಲ್ಲೂ ಅಳವಡಿಸಿಕೊಳ್ಳಬೇಕು. 'ಕಳಬೇಡ, ಕೊಲಬೇಡ, ಮುನಿಯಬೇಡ?' ಎಂಬ ಒಂದೇ ವಚನವನ್ನು ಜೀವನದಲ್ಲಿ ಪಾಲಿಸಿದರೂ ಉತ್ತಮ ಸಮಾಜ ನಿರ್ಮಾಣ ಸಾಧ್ಯ ಎಂದು ಹೇಳಿದರು.

ಶರಣ ತತ್ವ ಚಿಂತಕ ಅಶೋಕ ಬರಗುಂಡಿ ಮಾತನಾಡಿ, ನಶಿಸಿಹೋಗುತ್ತಿದ್ದ ವಚನ ಸಾಹಿತ್ಯವನ್ನು ಉಳಿಸಲು ಡಾ. ಫ.ಗು. ಹಳಕಟ್ಟಿಯವರು ನಡೆಸಿದ ಹೋರಾಟ ಅಪರೂಪದದ್ದು ಎಂದು ಬಣ್ಣಿಸಿದರು.

ಬಸವಣ್ಣ, ಅಲ್ಲಮಪ್ರಭು ಸೇರಿದಂತೆ ಶರಣರ ವಚನಗಳು ಚದುರಿಹೋಗಿದ್ದ ಸಂದರ್ಭದಲ್ಲಿ ಅವುಗಳನ್ನು ಸಂಗ್ರಹಿಸಿ, ವೈಜ್ಞಾನಿಕವಾಗಿ ವರ್ಗೀಕರಿಸಿ ಸಮಾಜಕ್ಕೆ ಮರಳಿ ನೀಡಿದ ಪುಣ್ಯಾತ್ಮ ಹಳಕಟ್ಟಿಯವರು. ಅವರ ಅಸಾಧಾರಣ ಪರಿಶ್ರಮದ ಫಲವಾಗಿ 15 ಸಂಪುಟಗಳು ಹಾಗೂ ಶಿವಾನುಭವದ 35 ಸಂಪುಟಗಳು ಪ್ರಕಟವಾಗಿವೆ ಎಂದು ಹೇಳಿದರು.



1880ರ ಜುಲೈ 2ರಂದು ಜನಿಸಿದ ಹಳಕಟ್ಟಿಯವರು ವಿದ್ಯಾರ್ಥಿ ಜೀವನದಿಂದಲೇ ಲಿಂಗಾಯತ ಧರ್ಮದ ಇತಿಹಾಸ ಮತ್ತು ವಚನ ಸಾಹಿತ್ಯದ ಕುರಿತು ಅಪಾರ ಆಸಕ್ತಿ ಹೊಂದಿದ್ದರು. ವಕೀಲರಾಗಿ ಲಕ್ಷಾಂತರ ರೂಪಾಯಿ ಸಂಪಾದಿಸುವ ಅವಕಾಶವಿದ್ದರೂ ಅದನ್ನು ತ್ಯಜಿಸಿ ವಚನಗಳ ಹುಡುಕಾಟಕ್ಕೆ ಜೀವನವನ್ನೇ ಮೀಸಲಿಟ್ಟರು ಎಂದು ವಿವರಿಸಿದರು.

ಹಾಲಭಾವಿ ವೀರಭದ್ರಪ್ಪ ತಂದ ಪ್ರಭುಲಿಂಗಲೀಲೆ ಹಾಗೂ ಗಣಭಾಷಿತ ರತ್ನಮಾಲೆ ಗ್ರಂಥಗಳ ಮೂಲಕ ವಚನಗಳತ್ತ ಆಕರ್ಷಿತರಾದ ಹಳಕಟ್ಟಿಯವರು ನಂತರ ಸಾವಿರಾರು ತಾಳೆಗರಿಗಳನ್ನು ಸಂಗ್ರಹಿಸಿ, ವಚನಗಳನ್ನು ವೈಜ್ಞಾನಿಕವಾಗಿ ವರ್ಗೀಕರಿಸಿದರು. ಸುಮಾರು 2,665 ವಚನಗಳನ್ನು 232 ಶೀರ್ಷಿಕೆಗಳಡಿ ಜೋಡಿಸಲು ಹತ್ತು ವರ್ಷಗಳ ಕಾಲ ನಿರಂತರ ಶ್ರಮಿಸಿದರು ಎಂದು ಹೇಳಿದರು.

ಮುದ್ರಣಕ್ಕೆ ಹಣದ ಕೊರತೆ ಎದುರಾದಾಗ ಸ್ವಂತ ಮನೆಯನ್ನೇ ಮಾರಾಟ ಮಾಡಿ 'ಹಿತಚಿಂತಕ' ಮುದ್ರಣಾಲಯ ಆರಂಭಿಸಿದರು. ನವಕರ್ನಾಟಕ ವಾರಪತ್ರಿಕೆಯ ಮೂಲಕ 25 ವರ್ಷಗಳ ಕಾಲ ಶರಣ ತತ್ವಗಳನ್ನು ಜನರಿಗೆ ತಲುಪಿಸಿದರು. ಮಗನನ್ನು ಕಳೆದುಕೊಂಡ ನೋವು, ಕಡು ಬಡತನ, ಅನಾರೋಗ್ಯ ಸೇರಿದಂತೆ ಅನೇಕ ಸಂಕಷ್ಟಗಳ ನಡುವೆಯೂ ವಚನ ಸಂಶೋಧನೆಯಿಂದ ಹಿಂದೆ ಸರಿಯಲಿಲ್ಲ. ಸುಮಾರು 25 ಸಾವಿರ ಪುಟಗಳಷ್ಟು ವಚನ ಸಾಹಿತ್ಯವನ್ನು ಸಮಾಜಕ್ಕೆ ಕೊಡುಗೆಯಾಗಿ ನೀಡಿದ ಮಹಾತ್ಮ ಅವರು ಎಂದು ಬರಗುಂಡಿ ಭಾವುಕರಾಗಿ ಸ್ಮರಿಸಿದರು.

> ವಚನ ಸಾಹಿತ್ಯ ಉಳಿಸಲು ಡಾ. ಫ.ಗು. ಹಳಕಟ್ಟಿ ತಮ್ಮ ಇಡೀ ಬದುಕನ್ನೇ ಮುಡಿಪಾಗಿಟ್ಟಿದ್ದರು. ಅವರನ್ನು ಸ್ಮರಿಸುವುದಕ್ಕಿಂತ ಅವರ ಆದರ್ಶ ಮತ್ತು ವಚನಗಳ ಸಂದೇಶವನ್ನು ಬದುಕಿನಲ್ಲಿ ಅಳವಡಿಸಿಕೊಳ್ಳುವುದೇ ನಿಜವಾದ ಗೌರವ.
> **–ಎಸ್.ವಿ. ಸಂಕನೂರ,**
> ವಿಧಾನ ಪರಿಷತ್ ಸದಸ್ಯ

"ನನ್ನನ್ನು ಹೊಗಳಬೇಡಿ, ನನ್ನನ್ನು ನೆನೆಯಬೇಡಿ, ನನ್ನನ್ನು ಹೊಗಳುವ ಬದಲು ವಚನಗಳಂತೆ ಬದುಕಿ" ಎಂಬ ಹಳಕಟ್ಟಿಯವರ ಕೊನೆಯ ಸಂದೇಶವೇ ಅವರ ಬದುಕಿನ ಸಾರವಾಗಿದೆ. ಸಮಾಜದ ಪ್ರತಿಯೊಬ್ಬರೂ ಆ ಆದರ್ಶವನ್ನು ಪಾಲಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ ಅಂಗವಾಗಿ ಪ್ರೌಢಶಾಲೆ ಮತ್ತು ಕಾಲೇಜು ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ಪ್ರಬಂಧ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಮೃತ್ಯುಂಜಯ ಹಿರೇಮಠ ಮತ್ತು ತಂಡ ನಾಡಗೀತೆ ಪ್ರಸ್ತುತಪಡಿಸಿದರು.

ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ವಿ. ಬಳ್ಳಾರಿ, ಶರಣ ಸಾಹಿತ್ಯ ಚಿಂತಕ ಬಳಿಗಾರ, ಕರ್ನಾಟಕ ಜನಪದ ಅಕಾಡೆಮಿಯ ಸದಸ್ಯ ಶಂಕರಣ್ಣ ಸಂಕಣ್ಣನವರ, ಎಸ್.ಎನ್. ಬಳ್ಳಾರಿ, ವಿವಿಧ ಇಲಾಖೆಗಳ ಅಧಿಕಾರಿಗಳು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

## ಮತದಾರರ ಜಾಗೃತಿಗೆ ಇಂದು ವಾಕ್‌ಥಾನ್

**ವಿಜಯಸಾಕ್ಷಿ ಸುದ್ದಿ, ಗದಗ**

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ–2026ರ ಅಂಗವಾಗಿ ಮತದಾರರಲ್ಲಿ ಜಾಗೃತಿ ಮೂಡಿಸಲು ಜಿಲ್ಲಾಡಳಿತ ಶುಕ್ರವಾರ (ಜು. 3) ಬೆಳಿಗ್ಗೆ ಗದಗ ನಗರದಲ್ಲಿ ವಾಕ್‌ಥಾನ್ ಹಾಗೂ ಜಾಗೃತಿ ರ‍್ಯಾಲಿ ಆಯೋಜಿಸಿದೆ.

ಬೆಳಿಗ್ಗೆ 9 ಗಂಟೆಗೆ ನಗರದ ಮುನ್ಸಿಪಲ್ ಹೈಸ್ಕೂಲ್ ಆವರಣದಿಂದ ಆರಂಭವಾಗುವ ವಾಕ್‌ಥಾನ್ ಮಹೇಂದ್ರಕರ ಸರ್ಕಲ್, ಟಾಂಗಾ ಕೂಟ, ಬಸವೇಶ್ವರ ಸರ್ಕಲ್ ಹಾಗೂ ಜೋಡು ಮಾರುತಿ ರಸ್ತೆ ಮೂಲಕ ಮುಳಗುಂದ ನಾಕಾವರೆಗೆ ಸಂಚರಿಸಿ ಮುಕ್ತಾಯಗೊಳ್ಳಲಿದೆ.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಜಿಲ್ಲೆಯ ವಿವಿಧ ಇಲಾಖೆಗಳ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಪ್ರತಿನಿಧಿಗಳು, ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು, ಸ್ವಸಹಾಯ ಸಂಘಗಳ ಸದಸ್ಯರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷ ಸಿ.ಎನ್. ಶ್ರೀಧರ್ ಮನವಿ ಮಾಡಿದ್ದಾರೆ.

## ಎಸ್‌ಐಆರ್ 4,200 ಫಾರ್ಮ್‌ಗಳ ಡಿಜಿಟಲೀಕರಣ ಪೂರ್ಣ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯ ವೇಗ ಪಡೆದುಕೊಂಡಿದ್ದು, ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ ಮನೆಗೆ ತೆರಳಿ ಮತದಾರರಿಗೆ ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸುತ್ತಿದ್ದಾರೆ.

ಜಿಲ್ಲೆಯಲ್ಲಿ ಒಟ್ಟು 9,02,947 ಮತದಾರರು ಹಾಗೂ 967 ಮತಗಟ್ಟೆಗಳು ಇದ್ದು, ಈವರೆಗೆ 96.38 ಶೇಕಡಾ ಮತದಾರರ ಮ್ಯಾಪಿಂಗ್ ಪೂರ್ಣಗೊಂಡಿದೆ.

ಜುಲೈ 1ರವರೆಗೆ ಜಿಲ್ಲೆಯಲ್ಲಿ 73,568 ಎನ್ಯುಮರೇಷನ್ ಫಾರ್ಮ್‌ಗಳನ್ನು ಮತದಾರರಿಗೆ ವಿತರಿಸಲಾಗಿದ್ದು, 4,200 ಫಾರ್ಮ್‌ಗಳನ್ನು ಡಿಜಿಟಲೀಕರಣ ಮಾಡಲಾಗಿದೆ.

ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯದ ಅಂಗವಾಗಿ ಬಿಎಲ್‌ಒಗಳು ಜುಲೈ 29ರವರೆಗೆ ಮನೆ ಮನೆಗೆ ಭೇಟಿ ನೀಡಿ ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸಲಿದ್ದಾರೆ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ.

## ರೈತರಿಂದ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕಿನ ರೈತರಿಗೆ ಕೃಷಿ ಇಲಾಖೆಯಿಂದ ಮತ್ತೊಂದು ಅನುಕೂಲ ದೊರಕಿದ್ದು, 2026–27ನೇ ಸಾಲಿನ ಪ್ರಧಾನಮಂತ್ರಿ ಕೃಷಿ ಸಿಂಚಾಯಿ ಯೋಜನೆ (ಪಿಎಂಕೆಎಸ್‌ವೈ) ಅಡಿಯಲ್ಲಿ ತುಂತುರು ನೀರಾವರಿ ಘಟಕ ಹಾಗೂ ಪಿವಿಸಿ ಪೈಪುಗಳನ್ನು ಸಹಾಯಧನದಲ್ಲಿ ವಿತರಿಸಲಾಗುತ್ತಿದೆ.

ನೀರಾವರಿ ಕೃಷಿ ಹೊಂಡ, ಬೋರ್‌ವೆಲ್ ಅಥವಾ ನಾಲೆ ಪಕ್ಕದಲ್ಲಿ ಜಮೀನು ಹೊಂದಿರುವ ರೈತರು ಈ ಯೋಜನೆಯ ಸೌಲಭ್ಯ ಪಡೆಯಲು ಅರ್ಹರಾಗಿದ್ದಾರೆ.

ಈ ಹಿಂದೆ ಪಿವಿಸಿ ಪೈಪುಗಳನ್ನು ಪಡೆಯಲು ಸಂಪೂರ್ಣ ಮೊತ್ತ ಪಾವತಿಸಬೇಕಾಗುತ್ತಿತ್ತು. ಆದರೆ ಇದೀಗ ರೈತರು ತಮ್ಮ ವಂತಿಕೆಯ ಮೊತ್ತ ಪಾವತಿಸಿದರೆ ಸಾಕು. ಉಳಿದ ಮೊತ್ತವನ್ನು ಯೋಜನೆಯಡಿ ಸರ್ಕಾರ ಭರಿಸಲಿದೆ.

63 ಎಂಎಂ ಗಾತ್ರದ 35 ಪೈಪುಗಳ ಘಟಕಕ್ಕೆ ರೈತರ ವಂತಿಕೆ ರೂ.9,912, 75 ಎಂಎಂ ಗಾತ್ರದ 25 ಪೈಪುಗಳ ಘಟಕಕ್ಕೆ ರೂ. 9,575 ಹಾಗೂ 90 ಎಂಎಂ ಗಾತ್ರದ 18 ಪೈಪುಗಳ ಘಟಕಕ್ಕೆ ರೂ.9,747 ನಿಗದಿಪಡಿಸಲಾಗಿದೆ.

ಯೋಜನೆಯ ಕುರಿತು ಹೆಚ್ಚಿನ ಮಾಹಿತಿಗಾಗಿ ರೈತರು ಹುಲಕೋಟಿ ಹಾಗೂ ಬೆಟಗೇರಿ ರೈತ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸಬಹುದು ಎಂದು ಗದಗ ಸಹಾಯಕ ಕೃಷಿ ನಿರ್ದೇಶಕ ಮಲ್ಲಯ್ಯ ಕೊರವನವರ ತಿಳಿಸಿದ್ದಾರೆ.

## ಹಲವು ತಿಂಗಳಿಂದ ಸ್ಥಗಿತಗೊಂಡ ವೃದ್ಧಾಪ್ಯ ವೇತನ ಬಿಡುಗಡೆಗೆ ಕರ್ನಾಟಕ ರಾಜ್ಯ ಹಿರಿಯ ನಾಗರಿಕರ ಸಂಘ ಒತ್ತಾಯ

# ಹಿರಿಯ ನಾಗರೀಕರ ಪಿಂಚಣಿ ಮರು ಪ್ರಾರಂಭಿಸಲು ಮನವಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ತಾಲ್ಲೂಕಿನ ಕೆಲ ಅರ್ಹ ಹಿರಿಯ ನಾಗರಿಕರ ವೃದ್ಧಾಪ್ಯ ವೇತನ ಹಲವು ತಿಂಗಳಿಂದ ಸ್ಥಗಿತಗೊಂಡಿರುವುದನ್ನು ಖಂಡಿಸಿ, ಕೂಡಲೇ ಪಿಂಚಣಿ ಮರುಪ್ರಾರಂಭಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಹಿರಿಯ ನಾಗರಿಕರು ಹಾಗೂ ನಿವೃತ್ತ ನೌಕರರ ಸಂಘದ ಲಕ್ಷ್ಮೇಶ್ವರ ತಾಲ್ಲೂಕು ಘಟಕದ ಪದಾಧಿಕಾರಿಗಳು ಗುರುವಾರ ತಹಸೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರು.

ಸಂಘದ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ಮಾತನಾಡಿ, ಅನೇಕ ಬಡ ಹಿರಿಯ ನಾಗರಿಕರು ತಿಂಗಳ ಪಿಂಚಣಿಯನ್ನೇ ನಂಬಿ ಜೀವನ ಸಾಗಿಸುತ್ತಿದ್ದಾರೆ. ಹಲವರ ಪಿಂಚಣಿ ಯಾವುದೇ ಕಾರಣವಿಲ್ಲದೆ ಸ್ಥಗಿತಗೊಂಡಿದ್ದು, ಆಸ್ಪತ್ರೆ, ಔಷಧಿ ಹಾಗೂ ದಿನನಿತ್ಯದ ಖರ್ಚು ನಿರ್ವಹಿಸಲು ಪರದಾಡುವಂತಾಗಿದೆ ಎಂದು ಹೇಳಿದರು.

ಸಂಘದ ಸದಸ್ಯರು ಸಲ್ಲಿಸಿರುವ ದಾಖಲೆಗಳನ್ನು ಪರಿಶೀಲಿಸಿ, ಅರ್ಹ ಫಲಾನುಭವಿಗಳ ವೃದ್ಧಾಪ್ಯ ವೇತನವನ್ನು ತಕ್ಷಣ ಮರುಪ್ರಾರಂಭಿಸಬೇಕು. ವೃದ್ಧಾಪ್ಯದಲ್ಲಿ ಸರ್ಕಾರದ ಈ ಸೌಲಭ್ಯವೇ ಅವರಿಗೆ ಆಸರೆಯಾಗಿದ್ದು, ಅಧಿಕಾರಿಗಳು ಮಾನವೀಯ ದೃಷ್ಟಿಯಿಂದ ಸ್ಪಂದಿಸಬೇಕು ಎಂದು ಒತ್ತಾಯಿಸಿದರು.

ಹಿರಿಯ ಸದಸ್ಯ ಚಂಬಣ್ಣ ಬಾಳಿಕಾಯಿ ಮಾತನಾಡಿ, ಪಿಂಚಣಿ ಸ್ಥಗಿತಗೊಂಡಿರುವುದರಿಂದ ಅನೇಕ ಹಿರಿಯ ನಾಗರಿಕರು ಸಂಕಷ್ಟ ಅನುಭವಿಸುತ್ತಿದ್ದು, ಕೂಡಲೇ ವೇತನ ಬಿಡುಗಡೆಗೊಳಿಸಬೇಕು ಎಂದು ಆಗ್ರಹಿಸಿದರು.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಚನ್ನಪ್ಪ ಕೋಲಕಾರ, ಸೂಗಿರಪ್ಪ ವಾಲಿಶೆಟ್ಟರ, ನೀಲಪ್ಪ ಕರ್ಜಕಣ್ಣವರ, ಗೊರವರ, ಯಲ್ಲಪ್ಪ ಬಿಂಜಡಗಿ, ಬಾಬಣ್ಣ ವಡಕಣ್ಣವರ, ನಿಂಗಪ್ಪ ಜಾವೂರ, ಮಡಿವಾಳರ ಸೇರಿದಂತೆ ಸಂಘದ ಸದಸ್ಯರು ಉಪಸ್ಥಿತರಿದ್ದರು.

## ಜಿಮ್ಸ್‌ನಲ್ಲಿ ಚಿಕಿತ್ಸೆ ನಿರ್ಲಕ್ಷ್ಯ ಆರೋಪ;

# ಮಹಿಳೆ ಸಾವು, ಕುಟುಂಬಸ್ಥರ ಆಕ್ರೋಶ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ನಗರದ ಜಿಮ್ಸ್ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಮಹಿಳೆಯೊಬ್ಬರು ಆಸ್ಪತ್ರೆ ಆವರಣದಲ್ಲೇ ಮೃತಪಟ್ಟ ಘಟನೆ ತೀವ್ರ ಚರ್ಚೆಗೆ ಕಾರಣವಾಗಿದೆ. ವೈದ್ಯರ ನಿರ್ಲಕ್ಷ್ಯದಿಂದಲೇ ತಮ್ಮ ತಾಯಿ ಮೃತಪಟ್ಟಿದ್ದಾರೆ ಎಂದು ಕುಟುಂಬಸ್ಥರು ಗಂಭೀರ ಆರೋಪ ಮಾಡಿದ್ದು, ಜಿಮ್ಸ್ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ ಈ ಆರೋಪವನ್ನು ನಿರಾಕರಿಸಿದ್ದಾರೆ.

ಮೃತರನ್ನು ಮುಂಡರಗಿ ತಾಲೂಕಿನ ಶೀರನಹಳ್ಳಿ ಗ್ರಾಮದ ರತ್ನವ್ವ ಈಟಿ (45) ಎಂದು ಗುರುತಿಸಲಾಗಿದೆ. ಹೊಟ್ಟೆನೋವು ಹಾಗೂ ಚರ್ಮದ ಕಾಯಿಲೆಗೆ ಚಿಕಿತ್ಸೆ ಪಡೆಯಲು ಅವರನ್ನು ಜಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿತ್ತು.



ತೀವ್ರ ಹೊಟ್ಟೆ ನೋವಿನಿಂದ ಗೋಳಾಡುತ್ತಿದ್ದರೂ ವೈದ್ಯರು ಸಮರ್ಪಕ ಚಿಕಿತ್ಸೆ ನೀಡಲಿಲ್ಲ. ಸಕಾಲಕ್ಕೆ ಚಿಕಿತ್ಸೆ ನೀಡಿದ್ದರೆ ಹಾಗೂ ಒಂದು ಇಂಜೆಕ್ಷನ್ ನೀಡಿದ್ದರೂ ನಮ್ಮ ತಾಯಿ ಬದುಕುತ್ತಿದ್ದರು ಎಂದು ಪುತ್ರರು ಆರೋಪಿಸಿದ್ದಾರೆ.

ಈ ಕುರಿತು ಪ್ರತಿಕ್ರಿಯಿಸಿದ ಜಿಮ್ಸ್ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ಮಹಿಳೆ ವೈದ್ಯರ ನಿರ್ಲಕ್ಷ್ಯದಿಂದ ಮೃತಪಟ್ಟಿಲ್ಲ. ಹೃದಯಾಘಾತವೇ ಸಾವಿಗೆ ಕಾರಣ. ರೋಗಿ ಚರ್ಮದ ಕಾಯಿಲೆಗೆ ದೀರ್ಘಕಾಲದಿಂದ ಸ್ಟೀರಾಯ್ಡ್ ಔಷಧಿಗಳನ್ನು ಸೇವಿಸುತ್ತಿದ್ದರು. ಬಳಿಕ ಕುಟುಂಬಸ್ಥರೇ ಬೇರೆ ಆಸ್ಪತ್ರೆಗೆ ಕರೆದೊಯ್ಯುವುದಾಗಿ ಹೇಳಿ ಡಿಸ್ಚಾರ್ಜ್ ಪಡೆದುಕೊಂಡಿದ್ದು, ಆಸ್ಪತ್ರೆ ಆವರಣದಿಂದ ಹೊರಡುವ ವೇಳೆ ಹೃದಯಾಘಾತವಾಗಿ ಮೃತಪಟ್ಟಿದ್ದಾರೆ ಎಂದು ಸ್ಪಷ್ಟಪಡಿಸಿದರು.

ಘಟನೆಗೆ ಸಂಬಂಧಿಸಿದಂತೆ ಕುಟುಂಬಸ್ಥರ ಆರೋಪ ಮತ್ತು ಆಸ್ಪತ್ರೆ ಆಡಳಿತದ ಸ್ಪಷ್ಟನೆ ನಡುವೆ ನಿಜಾಂಶ ಏನು ಎಂಬುದು ತನಿಖೆಯಿಂದಷ್ಟೇ ಸ್ಪಷ್ಟವಾಗಬೇಕಿದೆ.

# ಗದಗಕ್ಕೆ ನೀರಿಲ್ಲ... ಹುಲಕೋಟಿಗೆ ಸ್ವಿಮ್ಮಿಂಗ್ ಪೂಲ್!

## ಗದಗದ ಜನರ ಸಂಕಷ್ಟ ಕಡೆಗಣಿಸಲಾಗಿದೆ ಎಂದು ಎಚ್.ಕೆ. ಪಾಟೀಲ ವಿರುದ್ಧ ರಾಜು ಕುರುಡಗಿ ಆರೋಪ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ–ಬೆಟಗೇರಿ ಅವಳಿ ನಗರದ ಜನತೆ ದಶಕಗಳಿಂದ ಕುಡಿಯುವ ನೀರಿನ ಸಮಸ್ಯೆಯಿಂದ ಬಳಲುತ್ತಿದ್ದರೂ, ಅದನ್ನು ಬಗೆಹರಿಸುವಲ್ಲಿ ಶಾಸಕ ಎಚ್.ಕೆ. ಪಾಟೀಲ ವಿಫಲರಾಗಿದ್ದಾರೆ ಎಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ತೋಟಪ್ಪ (ರಾಜು) ಕುರುಡಗಿ ಆರೋಪಿಸಿದ್ದಾರೆ.



ಪತ್ರಿಕಾ ಪ್ರಕಟಣೆಯಲ್ಲಿ ಆರೋಪಿಸಿರುವ ಅವರು, ಗದಗ ಮತಕ್ಷೇತ್ರದಲ್ಲಿ ಹಲವು ವರ್ಷಗಳಿಂದ ಒಂದೇ ಕುಟುಂಬದವರು ಶಾಸಕರು ಹಾಗೂ ಸಚಿವರಾಗಿದ್ದರೂ ಜನರ ಮೂಲಭೂತ ಸಮಸ್ಯೆಯಾದ ಕುಡಿಯುವ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಲು ಸಾಧ್ಯವಾಗಿಲ್ಲ ಎಂದು ಟೀಕಿಸಿದ್ದಾರೆ.

> ಗದಗದ ಜನರು ಕುಡಿಯುವ ನೀರಿಗಾಗಿ ಪರದಾಡುತ್ತಿರುವಾಗ ಹುಲಕೋಟಿಯಲ್ಲಿ ಸ್ವಿಮ್ಮಿಂಗ್ ಪೂಲ್ ನಿರ್ಮಿಸಿರುವುದು ಹಾಸ್ಯಾಸ್ಪದ. ಮೊದಲು ಜನರ ನೀರಿನ ಸಮಸ್ಯೆ ಬಗೆಹರಿಸಲಿ.
> **–ತೋಟಪ್ಪ (ರಾಜು) ಕುರುಡಗಿ**

ಗದಗ–ಬೆಟಗೇರಿ ಜನರು ಕುಡಿಯುವ ನೀರು, ಸ್ನಾನ ಹಾಗೂ ದೈನಂದಿನ ಬಳಕೆಯ ನೀರಿಗಾಗಿ ಪರದಾಡುತ್ತಿರುವ ಸಂದರ್ಭದಲ್ಲಿ ಹುಲಕೋಟಿಯಲ್ಲಿ ಸ್ವಿಮ್ಮಿಂಗ್ ಪೂಲ್ ನಿರ್ಮಿಸಿರುವುದು ಹಾಸ್ಯಾಸ್ಪದವಾಗಿದೆ. ಜನರ ಸಂಕಷ್ಟಕ್ಕಿಂತ ಇಂತಹ ಕಾಮಗಾರಿಗಳಿಗೆ ಆದ್ಯತೆ ನೀಡಿರುವುದು ಸರಿಯಲ್ಲ ಎಂದು ಹೇಳಿದ್ದಾರೆ.

ಗದಗ ಮತಕ್ಷೇತ್ರದ ನೀರಿನ ಸಮಸ್ಯೆ ಕುರಿತು ಸಾರ್ವಜನಿಕರು ಪ್ರಶ್ನಿಸಿದಾಗ ಸ್ಪಂದಿಸುವ ಬದಲು ನಿರ್ಲಕ್ಷ್ಯ ವಹಿಸಲಾಗುತ್ತಿದೆ. ನೀರಿನ ಸಮಸ್ಯೆಯನ್ನು ಬಗೆಹರಿಸುವ ಸಾಮರ್ಥ್ಯ ಇದ್ದರೆ ಜನರ ಮುಂದೆ ಸಾಬೀತುಪಡಿಸಲಿ. ಇಲ್ಲದಿದ್ದರೆ ಮುಂದಿನ ಚುನಾವಣೆಯಲ್ಲಿ ಜನರೇ ತಕ್ಕ ಉತ್ತರ ನೀಡಲಿದ್ದಾರೆ ಎಂದು ಕುರುಡಗಿ ಎಚ್ಚರಿಸಿದ್ದಾರೆ



**ವಿಜಯಸಾಕ್ಷಿ ಸುದ್ದಿ, ಗದಗ**

**ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ನಡೆದ ಉಭಯ ಗುರುಗಳ ಜಾತ್ರಾಮಹೋತ್ಸವದ ಅಂಗವಾಗಿ ಪಂ. ಪಂಚಾಕ್ಷರಿ ಗವಾಯಿಗಳವರ ಅಂಧರ ವಸತಿಯುತ ವಿಶೇಷ ಸಂಗೀತ ಶಾಲೆಯ ಅಂಧ ವಿದ್ಯಾರ್ಥಿಗಳು ಸಂಗೀತ ಸೇವೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಶಿರಹಟ್ಟಿಯ ಜಗದ್ಗುರು ಫಕೀರ ದಿಂಗಾಲೇಶ್ವರ ಮಹಾಸ್ವಾಮಿಗಳು ಉಪಸ್ಥಿತರಿದ್ದರು.**

## ಲಕ್ಷ್ಮೇಶ್ವರ ಕಾಲೇಜಿನಲ್ಲಿ ಎಸ್‌ಐಆರ್ ಜಾಗೃತಿ ಕಾರ್ಯಕ್ರಮ

# ಯುವ ಮತದಾರರೇ ಪ್ರಜಾಪ್ರಭುತ್ವದ ನಿಜವಾದ ಶಕ್ತಿ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪ್ರಜಾಪ್ರಭುತ್ವವನ್ನು ಬಲಪಡಿಸುವಲ್ಲಿ ಯುವ ಮತದಾರರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, 18 ವರ್ಷ ಪೂರ್ಣಗೊಂಡ ಪ್ರತಿಯೊಬ್ಬರೂ ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರನ್ನು ಕಡ್ಡಾಯವಾಗಿ ನೋಂದಾಯಿಸಿಕೊಳ್ಳಬೇಕು ಎಂದು ತಾಯಿ ಪಾರ್ವತಿ ಮಕ್ಕಳ ಬಳಗದ ಎಸ್.ಎಂ.ಜೆ.ವಿ.ಜಿ. ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಪ್ರಾಚಾರ್ಯೆ ಡಾ. ಸರಸ್ವತಿ ಹುಲ್ಲಣ್ಣನವರ ಹೇಳಿದರು.




ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗದ ಎಸ್.ಎಂ.ಜೆ.ವಿ.ಜಿ. ಪ್ರಥಮ ದರ್ಜೆ ಮಹಿಳಾ ಕಾಲೇಜಿನ ಇಲೆಕ್ಟೋರಲ್ ಲಿಟರಸಿ ಕ್ಲಬ್ ವತಿಯಿಂದ ಹಮ್ಮಿಕೊಂಡಿದ್ದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕುರಿತ ಜಾಗೃತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಯುವಕರು ದೇಶದ ದೊಡ್ಡ ಶಕ್ತಿಯಾಗಿದ್ದು, ಭಾರತದಲ್ಲಿ ಅತಿ ಹೆಚ್ಚು ಯುವ ಮತದಾರರಿದ್ದಾರೆ ಎಂದು ಹೇಳಿದರು.

ಮುಖ್ಯ ಅತಿಥಿಯಾಗಿದ್ದ ಎಸ್.ಎಂ. ವಿರಕ್ತಮಠ ಮಾತನಾಡಿ, ಮತದಾನದ ಮಹತ್ವ, ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳುವ ಅಗತ್ಯ ಹಾಗೂ ಪ್ರತಿಯೊಬ್ಬ ನಾಗರಿಕನ ಮತದಾನದ ಹಕ್ಕು ಮತ್ತು ಕರ್ತವ್ಯದ ಕುರಿತು ವಿದ್ಯಾರ್ಥಿನಿಯರಿಗೆ ಮಾಹಿತಿ ನೀಡಿದರು.

ಎಸ್.ಬಿ. ಅಣ್ಣಿಗೇರಿ ಸ್ವಾಗತಿಸಿದರು. ಜಗದೀಶ ದ್ಯಾಮಣ್ಣವರ ಕಾರ್ಯಕ್ರಮ ನಿರೂಪಿಸಿದರು. ಜಗದೀಶ ಶಿರಹಟ್ಟಿ ವಂದಿಸಿದರು. ಅರ್ಪಣಾ ರಾಯ್ಕರ್, ನಾಗರಾಜ ಬಾಸಾಪುರ, ಲಿಂಗರಾಜ ಕುಂಬಾರ ಸೇರಿದಂತೆ ಕಾಲೇಜಿನ ಬೋಧಕ–ಬೋಧಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಜಲಾಶಯದ ನೀರನ್ನು ಕುಡಿಯಲು ಮಾತ್ರ ಬಳಸಬೇಕು

**ವಿಜಯಸಾಕ್ಷಿ ಸುದ್ದಿ, ದಾವಣಗೆರೆ**

ಭದ್ರಾ ಅಚ್ಚುಕಟ್ಟು ವ್ಯಾಪ್ತಿಯಲ್ಲಿ ಪ್ರಸ್ತುತ ಮಳೆ ಕೊರತೆಯಿಂದಾಗಿ ಭದ್ರಾ ಜಲಾಶಯದಲ್ಲಿ ಸಾಕಷ್ಟು ಪ್ರಮಾಣದಲ್ಲಿ ನೀರು ಸಂಗ್ರಹವಾಗಿರುವುದಿಲ್ಲ.

ಆದಕಾರಣ ಮುಂಗಾರು ಹಂಗಾಮಿನ ಬೆಳೆಗಳಿಗೆ ಬಲದಂಡೆ ಮತ್ತು ಎಡದಂಡೆ ನಾಲೆಯಲ್ಲಿ ನೀರು ಹರಿಸಲು ಸಾಧ್ಯವಾಗುದಿಲ್ಲವೆಂದು ಮತ್ತು ಜಲಾಶಯದಲ್ಲಿ ಸಂಗ್ರಹವಾಗಿರುವ ನೀರನ್ನು ಕುಡಿಯಲು ಮಾತ್ರ ಬಳಸಲು ಸರ್ಕಾರದ ಆದೇಶವಾಗಿರುವ ಹಿನ್ನಲೆಯಲ್ಲಿ ಅಚ್ಚುಕಟ್ಟು ಭಾಗದ ಎಲ್ಲಾ ರೈತರು ಇಲಾಖೆಯೊಂದಿಗೆ ಸಹಕರಿಸಬೇಕೆಂದು ಅಧೀಕ್ಷಕ ಅಭಿಯಂತರರು ತಿಳಿಸಿದ್ದಾರೆ.

# ಜೀವನೋಪಾಯ ಹಕ್ಕಿಗೆ ಧಕ್ಕೆ ತರುವ ಕ್ರಮ ನಿಲ್ಲಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಫುಟ್‌ಪಾತ್ ತೆರವು ಕಾರ್ಯಾಚರಣೆ-ಯ ಹೆಸರಿನಲ್ಲಿ ಬೀದಿಬದಿ ವ್ಯಾಪಾರಿಗಳನ್ನು ಏಕಾಏಕಿ ಸ್ಥಳಾಂತರಿಸುವುದು ಅವರ ಜೀವನೋಪಾಯದ ಹಕ್ಕಿಗೆ ಧಕ್ಕೆ ತರುವ ಕ್ರಮವಾಗಿದೆ. ಬೀದಿ ವ್ಯಾಪಾರಿಗಳ (ಜೀವನೋಪಾಯ ರಕ್ಷಣೆ ಮತ್ತು ಬೀದಿ ವ್ಯಾಪಾರ ನಿಯಂತ್ರಣ) ಅಧಿನಿಯಮ-2014ರ ನಿಯಮಗಳನ್ನು ಪಾಲಿಸದೇ ನಡೆಯುತ್ತಿರುವ ತೆರವು ಕಾರ್ಯಾಚರಣೆಯನ್ನು ಸರ್ಕಾರ ಮರುಪರಿಶೀಲಿಸಬೇಕು ಎಂದು ಗದಗ-ಬೆಟಗೇರಿ ನಗರಸಭೆ ಪಟ್ಟಣ ವ್ಯಾಪಾರ ಸಮಿತಿ ಸದಸ್ಯ ಹಾಗೂ ದಿ ನೆಟ್‌ವರ್ಕ್ ಆಫ್ ಅಸೋಸಿಯೇಟೆಡ್ ಸ್ಟ್ರೀಟ್ ವೆಂಡರ್ಸ್ ಆಫ್ ಕರ್ನಾಟಕ ರಾಜ್ಯ ಸಂಚಾಲಕ ಅನ್ವರ್ ಶಿರಹಟ್ಟಿ ಆಗ್ರಹಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಫುಟ್‌ಪಾತ್ ತೆರವು ಹೆಸರಿನಲ್ಲಿ ಜೆಸಿಬಿಗಳ ಮೂಲಕ ಬೀದಿಬದಿ ವ್ಯಾಪಾರಿಗಳನ್ನು ತೆರವುಗೊಳಿಸುವ ಕಾರ್ಯ ಅಮಾನವೀಯವಾಗಿದೆ. ಸಾವಿರಾರು ಕುಟುಂಬಗಳು ಮಳೆ, ಬಿಸಿಲು, ಚಳಿ ಎನ್ನದೆ ಬೀದಿಬದಿ ವ್ಯಾಪಾರವನ್ನೇ ನಂಬಿ ಬದುಕುತ್ತಿವೆ. ಸಾರ್ವಜನಿಕರಿಗೆ ಕೈಗೆಟಕುವ ದರದಲ್ಲಿ ಅಗತ್ಯ ವಸ್ತುಗಳನ್ನು ಪೂರೈಸುತ್ತಾ ತಮ್ಮ ಕುಟುಂಬದ ಜೀವನ, ಮಕ್ಕಳ ಶಿಕ್ಷಣ ಹಾಗೂ ಆರೋಗ್ಯವನ್ನು ಇದೇ ಆದಾಯದ ಮೇಲೆ ನಡೆಸುತ್ತಿದ್ದಾರೆ ಎಂದು ಹೇಳಿದ್ದಾರೆ.

ಕೊರೊನಾ ಸಂಕಷ್ಟದ ಸಂದರ್ಭದಲ್ಲಿ



ಆಹಾರ ವಿತರಣೆ ಸೇರಿದಂತೆ ಸಾರ್ವಜನಿಕ ಸೇವೆಯಲ್ಲಿ ಬೀದಿಬದಿ ವ್ಯಾಪಾರಿಗಳು ಪ್ರಮುಖ ಪಾತ್ರವಹಿಸಿದ್ದರು. ಆಗ ಅವರನ್ನು 'ಕೊರೊನಾ ವಾರಿಯರ್ಸ್' ಎಂದು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಪ್ರಶಂಸಿಸಿದ್ದವು. ಆದರೆ ಇಂದು ಅದೇ ವ್ಯಾಪಾರಿಗಳನ್ನು ಜೀವನೋಪಾಯದಿಂದ ವಂಚಿಸುವ ಪ್ರಯತ್ನ ನಡೆಯುತ್ತಿರುವುದು ವಿಷಾದನೀಯ ಎಂದು ಅವರು ತಿಳಿಸಿದ್ದಾರೆ.

> ಫುಟ್‌ಪಾತ್ ಸಾರ್ವಜನಿಕರ ಹಕ್ಕು ಎಂಬುದರಲ್ಲಿ ಎರಡು ಮಾತಿಲ್ಲ. ಆದರೆ ಜೀವನೋಪಾಯವೂ ಮೂಲಭೂತ ಹಕ್ಕು. ಕಾನೂನು ಪಾಲಿಸದೆ ಬೀದಿಬದಿ ವ್ಯಾಪಾರಿಗಳನ್ನು ತೆರವುಗೊಳಿಸುವುದು ನ್ಯಾಯವಲ್ಲ.
> **-ಅನ್ವರ್ ಶಿರಹಟ್ಟಿ,**
> ರಾಜ್ಯ ಸಂಚಾಲಕ, ದಿ ನೆಟ್‌ವರ್ಕ್ ಆಫ್ ಅಸೋಸಿಯೇಟೆಡ್ ಸ್ಟ್ರೀಟ್ ವೆಂಡರ್ಸ್ ಆಫ್ ಕರ್ನಾಟಕ

ಬೀದಿ ವ್ಯಾಪಾರಿಗಳ (ಜೀವನೋಪಾಯ ರಕ್ಷಣೆ ಮತ್ತು ಬೀದಿ ವ್ಯಾಪಾರ ನಿಯಂತ್ರಣ) ಅಧಿನಿಯಮ?2014ರ ಪ್ರಕಾರ, ಯಾವುದೇ ಬೀದಿಬದಿ ವ್ಯಾಪಾರಿಯನ್ನು ತೆರವುಗೊಳಿಸುವ ಮೊದಲು ಪಟ್ಟಣ ವ್ಯಾಪಾರ ಸಮಿತಿಯಲ್ಲಿ ವಿಷಯ ಚರ್ಚೆಯಾಗಿ ನಿರ್ಣಯವಾಗಬೇಕು. ಅಗತ್ಯವಿದ್ದರೆ ಪರ್ಯಾಯ ಸ್ಥಳ ಗುರುತಿಸಿ, 30 ದಿನಗಳ ನೋಟಿಸ್ ನೀಡಿದ ಬಳಿಕವೇ ಕ್ರಮ ಕೈಗೊಳ್ಳಬೇಕು. ಈ ಕಾನೂನು ಪ್ರಕ್ರಿಯೆಯನ್ನು ಸಂಪೂರ್ಣವಾಗಿ ಕಡೆಗಣಿಸಿ ಏಕಪಕ್ಷೀಯವಾಗಿ ತೆರವು ಕಾರ್ಯಾಚರಣೆ ನಡೆಸುವುದು ಕಾನೂನುಬಾಹಿರ ಎಂದು ಅವರು ಆರೋಪಿಸಿದ್ದಾರೆ.

ಫುಟ್‌ಪಾತ್ ಸಾರ್ವಜನಿಕರ ಹಕ್ಕು ಎಂಬಂತೆ ಜೀವನೋಪಾಯವೂ ಮೂಲಭೂತ ಹಕ್ಕು ಎಂದು ಸುಪ್ರೀಂ ಕೋರ್ಟ್ ಸ್ಪಷ್ಟಪಡಿಸಿದೆ. ಆದರೆ ಫುಟ್‌ಪಾತ್ ಅತಿಕ್ರಮಿಸಿರುವ ದೊಡ್ಡ ದೊಡ್ಡ ಅಂಗಡಿಗಳು ಹಾಗೂ ವಾಣಿಜ್ಯ ಸಂಸ್ಥೆಗಳ ವಿರುದ್ಧ ಕ್ರಮ ಕೈಗೊಳ್ಳದೆ, ಸಣ್ಣ ವ್ಯಾಪಾರಿಗಳನ್ನು ಮಾತ್ರ ಗುರಿಯಾಗಿಸಲಾಗುತ್ತಿದೆ ಎಂಬ ಅನುಮಾನ ಮೂಡಿದೆ ಎಂದು ಅನ್ವರ್ ಶಿರಹಟ್ಟಿ ಹೇಳಿದ್ದಾರೆ.

ಪಟ್ಟಣ ವ್ಯಾಪಾರ ಸಮಿತಿಯ ನಿರ್ಧಾರವಿಲ್ಲದೆ ಬೀದಿಬದಿ ವ್ಯಾಪಾರಿಗಳನ್ನು ತೆರವುಗೊಳಿಸಬಾರದು. ಸರ್ಕಾರ ತನ್ನ ಆದೇಶವನ್ನು ಮರುಪರಿಶೀಲಿಸಿ, ಬೀದಿ ವ್ಯಾಪಾರಿಗಳ ಹಕ್ಕುಗಳನ್ನು ಕಾಪಾಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

# ನರೇಗಲ್ಲಕ್ಕೆ ಎಸ್‌ಬಿಐ ಆಗಮನ; ವೈದ್ಯರಿಗೆ ಗೌರವದ ನಮನ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದಲ್ಲಿ ನೂತನವಾಗಿ ಆರಂಭಗೊಂಡಿರುವ ಭಾರತೀಯ ಸ್ಟೇಟ್ ಬ್ಯಾಂಕ್ (ಎಸ್‌ಬಿಐ) ಶಾಖೆಯಲ್ಲಿ ವೈದ್ಯರ ದಿನಾಚರಣೆ ಹಾಗೂ ಬ್ಯಾಂಕಿನ ಸಂಸ್ಥಾಪನಾ ದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ವೈದ್ಯರನ್ನು ಸನ್ಮಾನಿಸುವ ಮೂಲಕ ಸೇವೆಯ ಮಹತ್ವವನ್ನು ಸ್ಮರಿಸಿದ ಕಾರ್ಯಕ್ರಮದಲ್ಲಿ ಸಾರ್ವಜನಿಕರು ಹಾಗೂ ಗಣ್ಯರು ಭಾಗವಹಿಸಿದರು.

ಹಿರಿಯ ವೈದ್ಯ ಡಾ. ಕೆ.ಬಿ. ಧನ್ನೂರ ಮಾತನಾಡಿ, ನರೇಗಲ್ಲದಲ್ಲಿ ಎಸ್‌ಬಿಐ ಶಾಖೆ ಆರಂಭವಾಗಿರುವುದು ಪಟ್ಟಣದ ಜನರ ಬಹುದಿನಗಳ ಕನಸಾಗಿತ್ತು. ಈ ಬೇಡಿಕೆಯನ್ನು ಈಡೇರಿಸಿದ ಬ್ಯಾಂಕಿನ ಹಿರಿಯ ಅಧಿಕಾರಿಗಳಿಗೆ ಅಭಿನಂದನೆ ಸಲ್ಲಿಸಿದ ಅವರು, ಸಾರ್ವಜನಿಕರು ಬ್ಯಾಂಕಿನ ಎಲ್ಲ ಸೇವೆಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಕರೆ ನೀಡಿದರು. ವೈದ್ಯರ ದಿನಾಚರಣೆಯನ್ನು ಬ್ಯಾಂಕ್‌ನಲ್ಲಿ



ಆಚರಿಸಿರುವುದು ಸಂತಸದ ಸಂಗತಿ ಎಂದು ಹೇಳಿದರು.

ಬ್ಯಾಂಕಿನ ನಿವೃತ್ತ ಅಧಿಕಾರಿ ಸುಭಾಷ್ ಸುಂಕದ, ಇಂಪೀರಿಯಲ್ ಬ್ಯಾಂಕ್‌ನಿಂದ ಭಾರತೀಯ ಸ್ಟೇಟ್ ಬ್ಯಾಂಕ್ ಆಗಿ ರೂಪುಗೊಂಡ ಇತಿಹಾಸವನ್ನು ವಿವರಿಸಿದರು.

ಸರ್ಕಾರಿ ಆಸ್ಪತ್ರೆಯ ವೈದ್ಯ ಡಾ. ಎ.ಡಿ. ಸಾಮುದ್ರಿ ಮಾತನಾಡಿ, ವೈದ್ಯರ ದಿನಾಚರಣೆ-ಯಂದೇ ನರೇಗಲ್ಲ ಶಾಖೆಯಲ್ಲಿ ಬ್ಯಾಂಕಿಂಗ್ ವ್ಯವಹಾರ ಆರಂಭವಾಗಿರುವುದು ವಿಶೇಷ. ಗ್ರಾಹಕರ ವಿಶ್ವಾಸ ಗಳಿಸಿ, ಸುತ್ತಮುತ್ತಲಿನ ಗ್ರಾಮಗಳ ಜನರಿಗೆ ಗುಣಮಟ್ಟದ ಸೇವೆ ಒದಗಿಸಬೇಕು ಎಂದು ಆಶಿಸಿದರು.

ಶಾಖಾಧಿಕಾರಿ ಮಾಲತೇಶ ಕದಂಬ ಮಾತನಾಡಿ, ಗ್ರಾಹಕರ ಸಹಕಾರದಿಂದ ಮಾತ್ರ ಬ್ಯಾಂಕ್ ಇನ್ನಷ್ಟು ಬೆಳೆಯಲು ಸಾಧ್ಯ. ಸ್ಥಳೀಯರು ತಮ್ಮ ಬಂಧು-ಬಾಂಧವರು ಹಾಗೂ ಸ್ನೇಹಿತರಿಗೂ ಎಸ್‌ಬಿಐನಲ್ಲಿ ಖಾತೆ ತೆರೆಯುವಂತೆ ಪ್ರೇರೇಪಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಡಾ. ನಾಗರಾಜ ಗ್ರಾಮಪುರೋಹಿತ, ಡಾ. ಎಲ್.ಎಸ್. ಗೌರಿ, ನಿವೃತ್ತ ಸೈನಿಕರ ಸಂಘದ ಅಧ್ಯಕ್ಷ ಶಿವಪುತ್ರಪ್ಪ ಸಂಗನಾಳ, ಎಸ್.ಕೆ. ಪಾಟೀಲ, ಸಿಬ್ಬಂದಿ ಸತ್ಯನಾರಾಯಣ, ಪ್ರಭುದೇವ ಮುಕ್ಕನಗೌಡ್ರ, ಅರುಣ ಕುಲಕರ್ಣಿ, ಮಲ್ಲಯ್ಯ ಗುಂಡಗೋಪುರಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಬಳಿಕ ಕೇಕ್ ಕತ್ತರಿಸುವ ಮೂಲಕ ವೈದ್ಯರ ದಿನಾಚರಣೆ ಹಾಗೂ ಎಸ್‌ಬಿಐ ಸಂಸ್ಥಾಪನಾ ದಿನವನ್ನು ಸಂಭ್ರಮದಿಂದ ಆಚರಿಸಲಾಯಿತು.

# ವಚನ ಉಳಿಸಿದ ಮಹಾತ್ಮನಿಗೆ ಶಿವಾನುಭವದ ನಮನ

## ಫ.ಗು. ಹಳಕಟ್ಟಿಯ ತ್ಯಾಗ ಸ್ಮರಿಸಿದ ಡಾ. ತೋಂಟದ ಸಿದ್ಧರಾಮ ಶ್ರೀ



**ವಿಜಯಸಾಕ್ಷಿ ಸುದ್ದಿ, ಗದಗ**

ಕಾಲಗರ್ಭದಲ್ಲಿ ಮರೆಯಾಗುತ್ತಿದ್ದ ವಚನ ಸಾಹಿತ್ಯವನ್ನು ಸಂಗ್ರಹಿಸಿ, ಸಂಶೋಧಿಸಿ, ಸಂರಕ್ಷಿಸುವ ಮೂಲಕ ಮುಂದಿನ ಪೀಳಿಗೆಗೆ ಅಮೂಲ್ಯ ಪರಂಪರೆಯನ್ನು ಉಳಿಸಿಕೊಟ್ಟ ವಚನ ಪಿತಾಮಹ ಡಾ. ಫ.ಗು. ಹಳಕಟ್ಟಿಯವರ ಸೇವೆ ಅನನ್ಯ ಎಂದು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಹೇಳಿದರು.

ನಗರದಲ್ಲಿ ಲಿಂಗಾಯತ ಪ್ರಗತಿಶೀಲ ಸಂಘ ಆಯೋಜಿಸಿದ್ದ 2804ನೇ ಶಿವಾನುಭವ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಅವರು, ಕನ್ನಡ ನಾಡು-ನುಡಿಯನ್ನು ಶ್ರೀಮಂತಗೊಳಿಸುವಲ್ಲಿ ವಚನ ಸಾಹಿತ್ಯದ ಪಾತ್ರ ಅಪಾರವಾಗಿದೆ. ಶರಣರ ತತ್ವಗಳು ಇಂದಿಗೂ ಸಮಾಜಕ್ಕೆ ಮಾರ್ಗದರ್ಶನ ನೀಡುತ್ತಿದ್ದು, ಮಾನವೀಯ ಮೌಲ್ಯಗಳ ನೆಲೆಗಟ್ಟಾಗಿ ಉಳಿದಿವೆ ಎಂದು ಹೇಳಿದರು.

ಮುಖ್ಯ ಉಪನ್ಯಾಸ ನೀಡಿದ ವಿಜಯಪುರದ ಫ.ಗು. ಹಳಕಟ್ಟಿ ಸಂಶೋಧನಾ ಕೇಂದ್ರದ ಮುಖ್ಯಸ್ಥ ಡಾ. ಎಂ.ಎಸ್. ಮದಭಾವಿ, ಹಳಕಟ್ಟಿಯವರು ತಮ್ಮ ವೈಯಕ್ತಿಕ ಸುಖವನ್ನು ತ್ಯಜಿಸಿ ಸಮಾಜಕ್ಕಾಗಿ ಬದುಕಿದ ಮಹನೀಯರು. ವಚನ ಸಾಹಿತ್ಯ ಉಳಿವಿಗಾಗಿ ತಮ್ಮ ಆಸ್ತಿಯನ್ನೇ ಮಾರಿಕೊಂಡು ಜೀವನವನ್ನೇ ಸಮರ್ಪಿಸಿದ ಅವರ ತ್ಯಾಗ ಇತಿಹಾಸದಲ್ಲಿ ಅಜರಾಮರವಾಗಿದೆ ಎಂದು ಹೇಳಿದರು.

ಶಿವಾನುಭವದಲ್ಲಿ ಲಿಂಗಾಯತ ಪ್ರಗತಿಶೀಲ ಸಂಘದ ಮಾಜಿ ಅಧ್ಯಕ್ಷ ಡಾ. ಜಿ.ಬಿ. ಪಾಟೀಲ ದಂಪತಿಯನ್ನು ಸನ್ಮಾನಿಸಲಾಯಿತು. ಬಳ್ಳಾರಿಯ ಡಾ. ತಿಪ್ಪೇರುದ್ರ ಸಂಡೂರ ಅವರ 'ಭುವಿಯ ಬೆಳಕು ಬಸವಣ್ಣ' ಕೃತಿಯನ್ನು ಲೋಕಾರ್ಪಣೆ ಮಾಡಲಾಯಿತು. ಉತ್ತರಾ-ಖಂಡದ ಉತ್ತರಕಾಶಿಯ ಟೆರ್ರಾಕೋಟ್ ಶಿಖರವನ್ನು ಆರೋಹಣ ಮಾಡಿದ ಗದಗ ಜಿಲ್ಲೆಯ ಸೃಷ್ಟಿ ಉಮೇಶ ಮೇಟಿ, ಅಶ್ವಿನಿ ತಿರ್ಲಾಪೂರ ಹಾಗೂ ಜಯಲಕ್ಷ್ಮಿ ಸಿ. ಹೊಳೆಯಾಚೆ ಅವರನ್ನು ಗೌರವಿಸಲಾಯಿತು.

> ಕನ್ನಡ ನಾಡು-ನುಡಿಗೆ ವಚನ ಸಾಹಿತ್ಯವೇ ಜೀವಾಳ. ಸೌಹಾರ್ದಯುತ, ಸುಂದರ ಸಮಾಜ ನಿರ್ಮಾಣವಾಗಬೇಕಾದರೆ ವಚನಗಳನ್ನು ಕೇವಲ ಓದುವುದಲ್ಲ, ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು
> -ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು

ಕಾರ್ಯಕ್ರಮದಲ್ಲಿ ಸಂಘದ ಅಧ್ಯಕ್ಷ ಡಾ. ಉಮೇಶ ಪುರದ, ಶಿವಾನುಭವ ಸಮಿತಿ ಅಧ್ಯಕ್ಷ ರಮೇಶ ಕಲ್ಲನಗೌಡರ, ಪ್ರಭು ಗಂಜಿಹಾಳ, ಸಿದ್ಧರಾಮ ಪಟ್ಟೇದ, ಪ್ರತಿಭಾ ಬಡ್ನಿ, ವೀರಣ್ಣ ಗೋಟಡಕಿ ಸೇರಿದಂತೆ ಸಂಘದ ಪದಾಧಿಕಾರಿಗಳು, ಭಕ್ತರು ಹಾಗೂ ಸಾರ್ವಜನಿಕರು ಭಾಗವಹಿಸಿದ್ದರು.

# ವೈದ್ಯರಿಗೆ ಪುಟಾಣಿಗಳಿಂದ ಗೌರವದ ನಮನ

**ವಿಜಯಸಾಕ್ಷಿ ಸುದ್ದಿ, ಗದಗ**

ವೈದ್ಯರ ದಿನಾಚರಣೆಯ ಅಂಗವಾಗಿ ನಗರದ ಕಳಸಾಪುರ ರಸ್ತೆಯಲ್ಲಿರುವ ಶ್ರೀ ಕಾಳಿದಾಸ ಶಿಕ್ಷಣ ಸಮಿತಿಯ ಶ್ರೀ ಕಾಳಿದಾಸ ಪೂರ್ವ ಪ್ರಾಥಮಿಕ ಹಾಗೂ ಇಂಗ್ಲಿಷ್ ಮಾಧ್ಯಮ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಚಿರಾಯು ಮಲ್ಟಿ-ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ವೈದ್ಯರಿಗೆ ಗೌರವ ಸಲ್ಲಿಸಿ ಅರ್ಥಪೂರ್ಣವಾಗಿ ದಿನವನ್ನು ಆಚರಿಸಿದರು.

ಕಾರ್ಯಕ್ರಮದಲ್ಲಿ ಮಕ್ಕಳನ್ನು ಉದ್ದೇಶಿಸಿ ಮಾತನಾಡಿದ ಚಿರಾಯು ಮಲ್ಟಿ-ಸ್ಪೆಷಾಲಿಟಿ ಆಸ್ಪತ್ರೆಯ ವೈದ್ಯ ಡಾ. ಗುರುಪ್ರಸಾದ ಎನ್., ಆರೋಗ್ಯವೇ ಬದುಕಿನ ಅತಿದೊಡ್ಡ ಸಂಪತ್ತು ಎಂದು ಹೇಳಿ, ಆರೋಗ್ಯಕರ ಜೀವನಶೈಲಿ, ಶುಚಿತ್ವ ಹಾಗೂ ಉತ್ತಮ



ಆಹಾರ ಪದ್ಧತಿಯ ಮಹತ್ವವನ್ನು ಮಕ್ಕಳಿಗೆ ತಿಳಿಸಿದರು.

ಆರೋಗ್ಯದ ಬಗ್ಗೆ ಬಾಲ್ಯದಿಂದಲೇ ಕಾಳಜಿ ವಹಿಸಿದರೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯವಾಗುತ್ತದೆ ಎಂದ ಅವರು, ವಿದ್ಯಾರ್ಥಿಗಳಲ್ಲಿ ವೈದ್ಯಕೀಯ ಸೇವೆಯ ಬಗ್ಗೆ ಆಸಕ್ತಿ ಮೂಡಿಸಿ, ಭವಿಷ್ಯದಲ್ಲಿ ಉತ್ತಮ ವೈದ್ಯರಾಗಿ ಸಮಾಜಸೇವೆ ಮಾಡುವಂತೆ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಆಸ್ಪತ್ರೆಯ ವೈದ್ಯರು, ಸಿಬ್ಬಂದಿ, ಶ್ರೀ ಕಾಳಿದಾಸ ಪೂರ್ವ ಪ್ರಾಥಮಿಕ ಹಾಗೂ ಇಂಗ್ಲಿಷ್ ಮಾಧ್ಯಮ ಪ್ರಾಥಮಿಕ ಶಾಲೆಯ ಶಿಕ್ಷಕರು, ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ರಕ್ತದಾನ ಶಿಬಿರ

**ವಿಜಯಸಾಕ್ಷಿ ಸುದ್ದಿ, ದಾವಣಗೆರೆ**

ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ವತಿಯಿಂದ ಜುಲೈ 5 ರಂದು ಬೆಳಿಗ್ಗೆ 9 ಗಂಟೆಗೆ ಮಾಳಗೊಂಡನಹಳ್ಳಿಯ ಕೊಕೊ ಫಾಮ್ಸ್ ನಲ್ಲಿ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ದಾವಣಗೆರೆ ಉತ್ತರ ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಬಿ.ಕೆ ಪರುಶುರಾಮ್ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಗ್ರಾ.ಪಂ ಸದಸ್ಯರಾದ ಕೆ.ಪಿ ರಾಜಪ್ಪ, ಸಂಚಾಲಕರಾದ ಶ್ರೀದತ್ತರಾಜ್.ಆರ್.ಜಿ ಭಾಗವಹಿಸುವರು.

# ಸಿಸಿ ರಸ್ತೆ ಕಾಮಗಾರಿಗೆ ಸಂಗನಗೌಡ ಪಾಟೀಲ ಚಾಲನೆ

**ವಿಜಯಸಾಕ್ಷಿ ಸುದ್ದಿ, ರೋಣ**

ರೋಣ ವಿಧಾನಸಭಾ ಕ್ಷೇತ್ರದ ಪ್ರತಿಯೊಂದು ಗ್ರಾಮದ ಅಭಿವೃದ್ಧಿಗೆ ಶಾಸಕ ಜಿ.ಎಸ್. ಪಾಟೀಲ ಬದ್ಧರಾಗಿದ್ದು, ಸಿಸಿ ರಸ್ತೆ, ಚರಂಡಿ, ಶಾಲಾ ಕೊಠಡಿ ಹಾಗೂ ರಸ್ತೆ ಅಭಿವೃದ್ಧಿ ಸೇರಿದಂತೆ ಹಲವು ಕಾಮಗಾರಿಗಳು ವೇಗವಾಗಿ ನಡೆಯುತ್ತಿವೆ ಎಂದು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ಸಂಗನಗೌಡ ಪಾಟೀಲ ಹೇಳಿದರು.

ಸವಡಿ ಗ್ರಾಮದಲ್ಲಿ ಮುಖ್ಯಮಂತ್ರಿಗಳ ವಿಶೇಷ ಅನುದಾನದ ರೂ.20 ಲಕ್ಷ ವೆಚ್ಚದ ಸಿಸಿ ರಸ್ತೆ ಕಾಮಗಾರಿಗೆ ಭೂಮಿಪೂಜೆ



ನೆರವೇರಿಸಿ ಅವರು ಮಾತನಾಡಿದರು.

ಗ್ರಾಮದ ಹಿರಿಯರೊಂದಿಗೆ ಚರ್ಚಿಸಿ ಅಗತ್ಯಕ್ಕೆ ಅನುಗುಣವಾಗಿ ಅಭಿವೃದ್ಧಿ ಕಾಮಗಾರಿಗಳಿಗೆ ಆದ್ಯತೆ ನೀಡಲಾಗುತ್ತಿದೆ. ಸರ್ಕಾರ ಸಾಕಷ್ಟು ಅನುದಾನ ಬಿಡುಗಡೆ ಮಾಡಿದ್ದು, ಶಾಸಕ ಜಿ.ಎಸ್. ಪಾಟೀಲ ಕ್ಷೇತ್ರಕ್ಕೆ ಹೆಚ್ಚಿನ ಯೋಜನೆಗಳನ್ನು ತರುವಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದಾರೆ ಎಂದು ಹೇಳಿದರು.

ಸವಡಿ ಗ್ರಾಮಕ್ಕೂ ಕಳೆದ ಮೂರು ವರ್ಷಗಳಲ್ಲಿ ಕೋಟ್ಯಂತರ ರೂಪಾಯಿ ಅನುದಾನ ದೊರೆತಿದ್ದು, ಹಲವು ಅಭಿವೃದ್ಧಿ ಕಾಮಗಾರಿಗಳು ಪೂರ್ಣಗೊಂಡಿವೆ. ಮಾರನಬಸರಿ ಗ್ರಾಮದಲ್ಲಿ ?35 ಲಕ್ಷ ವೆಚ್ಚದ ಸಿಸಿ ರಸ್ತೆ ಕಾಮಗಾರಿಯೂ ಪೂರ್ಣಗೊಂಡಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಲ್ಲನಗೌಡ ಪರಡ್ಡಿ, ಕುಬೇರಗೌಡ ಪರಡ್ಡಿ, ಸೋಮು ನಾಗರಾಜ, ಸುರೇಶ ನಡುವಿನಮನಿ, ಮುತ್ತಣ್ಣ ಹಲಗಿ, ಹುಚ್ಚೀರಪ್ಪ ಮಾದರ, ಶಂಭು ಮೆಣಸಗಿ, ಅನಿಲ ಮಂಗಳೂರ, ಉಮೇಶ ಗೇದಗೆರಿ, ಶಿವು ಕಂಬಳಿ, ರವಿ ಶಿವಪೂಜೆ, ಮಲ್ಲಪ್ಪ ನಿಡಗುಂದಿ, ಸುರೇಶ ಹಲಗಿ, ಮಾಂತೇಶ ಹಕ್ಕಿ, ಮತ್ತಿತರರು ಉಪಸ್ಥಿತರಿದ್ದರು.

# ಬೂತ್‌ನಿಂದಲೇ ಬಿಜೆಪಿಗೆ ಬಲ ತುಂಬಿ: ಪಕ್ಷ ಸಂಘಟನೆಗೆ ಮುತ್ತಣ್ಣ ಕಡಗದ ಕರೆ



**ವಿಜಯಸಾಕ್ಷಿ ಸುದ್ದಿ, ರೋಣ**

ಬಿಜೆಪಿ ಕಾರ್ಯಕರ್ತರು ಮತ್ತು ಮುಖಂಡರು ಬೂತ್ ಮಟ್ಟದಿಂದಲೇ ಪಕ್ಷವನ್ನು ಮತ್ತಷ್ಟು ಬಲಿಷ್ಠಗೊಳಿಸುವ ಕೆಲಸಕ್ಕೆ ಈಗಿನಿಂದಲೇ ಮುಂದಾಗಬೇಕು ಎಂದು ಬಿಜೆಪಿ ರೋಣ ಮಂಡಲದ ಮಾಜಿ ಅಧ್ಯಕ್ಷ ಮುತ್ತಣ್ಣ ಕಡಗದ ಹೇಳಿದರು.

ಸವಡಿ ಗ್ರಾಮದ ಬಿಜೆಪಿ ಪಕ್ಷದ ಕಚೇರಿಯಲ್ಲಿ ನಡೆದ ಸಂಘಟನಾತ್ಮಕ ಸಭೆಯಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಬಿಜೆಪಿ ಸರ್ಕಾರ ಅಧಿಕಾರದಲ್ಲಿದ್ದಾಗ ಕ್ಷೇತ್ರದಲ್ಲಿ ಕೈಗೊಂಡ ಅಭಿವೃದ್ಧಿ ಕಾಮಗಾರಿಗಳು ಹಾಗೂ ಮಾಜಿ ಶಾಸಕ ಕಳಕಪ್ಪ ಬಂಡಿಯವರ ಕೊಡುಗೆಗಳನ್ನು ಜನರಿಗೆ ತಲುಪಿಸುವ ಕೆಲಸವನ್ನು ಕಾರ್ಯಕರ್ತರು ಮಾಡಬೇಕು ಎಂದು ಹೇಳಿದರು.

ಕಳಕಪ್ಪ ಬಂಡಿಯವರು ಕ್ಷೇತ್ರದಲ್ಲಿ ಶೈಕ್ಷಣಿಕ ಅಭಿವೃದ್ಧಿಗೆ ವಿಶೇಷ ಒತ್ತು ನೀಡಿದ್ದು, ರಸ್ತೆ ಅಭಿವೃದ್ಧಿಗೆ ಕೋಟ್ಯಂತರ ರೂಪಾಯಿ ಅನುದಾನ ತಂದು ಸಾಮಾಜಿಕ ಬದ್ಧತೆಯಿಂದ ಕೆಲಸ ಮಾಡಿದ್ದಾರೆ. ಅವರ ಅಭಿವೃದ್ಧಿ ಕಾರ್ಯಗಳನ್ನು ಮನೆಮನೆಗೆ ತಲುಪಿಸುವ ಮೂಲಕ ಪಕ್ಷವನ್ನು ಮತ್ತಷ್ಟು ಸದೃಢಗೊಳಿಸಬೇಕು ಎಂದು ಕರೆ ನೀಡಿದರು.

ಸ್ಥಳೀಯ ಸಂಸ್ಥೆಗಳ ಚುನಾವಣೆ ಯಾವುದೇ ಸಮಯದಲ್ಲಿ ಘೋಷಣೆಯಾಗುವ ಸಾಧ್ಯತೆ ಇರುವುದರಿಂದ ಕಾರ್ಯಕರ್ತರು ಈಗಿನಿಂದಲೇ ಸಂಘಟನೆಗೆ ಒತ್ತು ನೀಡಿ ಗೆಲುವಿನ ಗುರಿಯೊಂದಿಗೆ ಕೆಲಸ ಮಾಡಬೇಕು. ಕೇಂದ್ರ ಸರ್ಕಾರದ ವಿವಿಧ ಜನಪರ ಯೋಜನೆಗಳನ್ನು ಜನರಿಗೆ ಮನವರಿಕೆ ಮಾಡಿಕೊಡುವ ಜವಾಬ್ದಾರಿಯನ್ನೂ ಕಾರ್ಯಕರ್ತರು ವಹಿಸಬೇಕು ಎಂದರು.

ಸಭೆಯಲ್ಲಿ ಅಶೋಕ ಪವಾಡಶೆಟ್ಟರ, ಶಂಕ್ರಯ್ಯ ಹಿರೇಮಠ, ಸಿ.ಎಸ್. ಗದಗ, ಕೂಡ್ಲೆಪ್ಪ ದಂಡಿನ, ಮಹ್ಮದ್ ತರಪದಾರ, ಸಚಿನ್ ಪಾಟೀಲ, ಪರಪ್ಪ ಹೊನ್ನಾಪುರ, ಸಂಗಮೇಶ ಬೆಳವಡಿ, ಅಂದಪ್ಪ ಕಡಿಯವರ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಮತದಾರರ ಹಕ್ಕು ಕಾಪಾಡಲು ಗ್ರಾಮದಲ್ಲಿ ಎಸ್‌ಐಆರ್ ಜಾಗೃತಿ

## ಮಾರನಬಸರಿಯಲ್ಲಿ ಬಿಎಲ್‌ಒಗಳಿಂದ ಅರ್ಜಿ ನಮೂನೆ ವಿತರಣೆ

**ವಿಜಯಸಾಕ್ಷಿ ಸುದ್ದಿ, ರೋಣ**

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಹಿನ್ನೆಲೆಯಲ್ಲಿ ಯಾವುದೇ ಅರ್ಹ ಮತದಾರ ಮತದಾನದ ಹಕ್ಕಿನಿಂದ ವಂಚಿತರಾಗದಂತೆ ಎಲ್ಲರೂ ಜಾಗೃತಿ ವಹಿಸಬೇಕು ಎಂದು ಗ್ರಾಮದ ಹಿರಿಯ ಶೇಖರಗೌಡ ಪಾಟೀಲ ಹೇಳಿದರು.

ಮಾರನಬಸರಿ ಗ್ರಾಮದಲ್ಲಿ ನಡೆದ ಎಸ್‌ಐಆರ್ ಜಾಗೃತಿ ಜಾಥಾದಲ್ಲಿ ಮಾತನಾಡಿದ ಅವರು, ಈ ಬಾರಿ ಮತದಾರರ ಪಟ್ಟಿಗೆ ಹೆಸರು ಸೇರ್ಪಡೆ ಹಾಗೂ ಪರಿಷ್ಕರಣೆಗೆ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕಿರುವುದರಿಂದ ಗ್ರಾಮೀಣ ಭಾಗದ ರೈತರು, ಕೂಲಿ ಕಾರ್ಮಿಕರಿಗೆ ಸೂಕ್ತ ಮಾಹಿತಿ ತಲುಪಿಸುವುದು ಅಗತ್ಯವಾಗಿದೆ. ವಿದ್ಯಾವಂತ



ಯುವಕರು ಹಾಗೂ ವಿವಿಧ ರಾಜಕೀಯ ಪಕ್ಷಗಳ ಕಾರ್ಯಕರ್ತರು ಈ ಕಾರ್ಯದಲ್ಲಿ ಕೈಜೋಡಿಸಬೇಕು ಎಂದರು.

ಚುನಾವಣಾ ಆಯೋಗದ ನಿರ್ದೇಶನದಂತೆ ಬಿಎಲ್‌ಒಗಳು ಮನೆ ಮನೆಗೆ ತೆರಳಿ ಅರ್ಜಿ ನಮೂನೆಗಳನ್ನು ವಿತರಿಸುತ್ತಿದ್ದು, ಅವುಗಳನ್ನು ಸರಿಯಾಗಿ ಭರ್ತಿ ಮಾಡಿ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸುವಂತೆ ತಿಳಿಸಿದರು.

ಮುಖಂಡ ಅಂದಪ್ಪ ಮರಡಿ ಮಾತನಾಡಿ, ಗ್ರಾಮದಲ್ಲಿರುವ ಪ್ರತಿಯೊಬ್ಬ ಅರ್ಹ ಮತದಾರನಿಗೂ ಎಸ್‌ಐಆರ್ ಕುರಿತು ಮಾಹಿತಿ ತಲುಪಿಸುವ ಕೆಲಸವನ್ನು ಯುವಕರು ಮಾಡಬೇಕು. ಹೊರ ಊರುಗಳಲ್ಲಿ ದುಡಿಯುತ್ತಿರುವ ಕುಟುಂಬಗಳಿಗೂ ಮಾಹಿತಿ ನೀಡಿ ಅಗತ್ಯ ದಾಖಲೆಗಳನ್ನು ಸಿದ್ಧಪಡಿಸಿಕೊಳ್ಳುವಂತೆ ಸಲಹೆ ನೀಡಿದರು.

ಬಳಿಕ ಬಿಎಲ್‌ಒಗಳು ಗ್ರಾಮದಲ್ಲಿ ಮನೆ ಮನೆಗೆ ತೆರಳಿ ಅರ್ಜಿ ನಮೂನೆಗಳನ್ನು ವಿತರಿಸಿದರು.


# ಬಿಳಿ ಕೋಟ್‌ಗೆ ಸಮಾಜದ ಗೌರವ

## ಕೋವಿಡ್‌ನಿಂದ ಸಂಕಷ್ಟದ ಕ್ಷಣಗಳವರೆಗೆ ವೈದ್ಯರ ನಿಸ್ವಾರ್ಥ ಸೇವೆ ಸ್ಮರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕೋವಿಡ್‌ನಂತಹ ಸಂಕಷ್ಟದ ಸಂದರ್ಭಗಳಲ್ಲಿ ತಮ್ಮ ಜೀವವನ್ನೇ ಪಣಕ್ಕಿಟ್ಟು ಜನರ ಆರೋಗ್ಯ ರಕ್ಷಣೆಗೆ ಶ್ರಮಿಸಿದ ವೈದ್ಯರ ಸೇವೆ ಸಮಾಜಕ್ಕೆ ಅಮೂಲ್ಯ ಕೊಡುಗೆ-'ಯಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಹೇಳಿದರು.

ನಗರದ ಕೆಎಚ್‌ಪಿಐಎಂಎಸ್ ಉಪನ್ಯಾಸ ಸಭಾಂಗಣದಲ್ಲಿ ಭಾರತೀಯ ವೈದ್ಯಕೀಯ ಸಂಘ (ಐಎಂಎ) ಗದಗ ಶಾಖೆ ಆಯೋಜಿಸಿದ್ದ ರಾಷ್ಟ್ರೀಯ ವೈದ್ಯರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.





ವೈದ್ಯಕೀಯ ವೃತ್ತಿ ಕೇವಲ ಉದ್ಯೋಗವಲ್ಲ, ಅದು ಮಾನವೀಯ ಸೇವೆಯ ಪ್ರತೀಕವಾಗಿದೆ. ಸಮಾಜದ ಆರೋಗ್ಯ ಮತ್ತು ಸುರಕ್ಷತೆಯಲ್ಲಿ ವೈದ್ಯರ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ಪ್ರತಿಯೊಂದು ಸಂಕಷ್ಟದ ಘಟ್ಟದಲ್ಲೂ ವೈದ್ಯ ಸಮುದಾಯ ನಿಸ್ವಾರ್ಥ ಸೇವೆ ಸಲ್ಲಿಸಿದೆ. ಜಿಲ್ಲೆಯ ಆರೋಗ್ಯ ಕ್ಷೇತ್ರದಲ್ಲಿ ಐಎಂಎ ಗದಗ ಶಾಖೆ ಕೈಗೊಂಡಿರುವ ಸಾಮಾಜಿಕ ಹಾಗೂ ವೈದ್ಯಕೀಯ ಸೇವಾ ಕಾರ್ಯಗಳು ಶ್ಲಾಘನೀಯ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಐಎಂಎ ಗದಗ ಶಾಖೆಯ ಅಧ್ಯಕ್ಷ ಡಾ. ಶ್ರೀಧರ ವಿ. ಕುರಡಗಿ ಮಾತನಾಡಿ, ವೈದ್ಯಕೀಯ ವೃತ್ತಿಯಲ್ಲಿ ನೈತಿಕ ಮೌಲ್ಯಗಳನ್ನು ಕಾಪಾಡುವ ಜತೆಗೆ ಅನಧಿಕೃತ ವೈದ್ಯಕೀಯ (ಕ್ವಾಕ್ ಪ್ರಾಕ್ಟೀಸ್) ವಿರುದ್ಧ ವೈದ್ಯರು ಸಂಘಟಿತವಾಗಿ ಹೋರಾಡಬೇಕಾದ ಅಗತ್ಯವಿದೆ ಎಂದು ಹೇಳಿದರು.

ಕೆಎಚ್‌ಪಿಐಎಂಎಸ್ ನಿರ್ದೇಶಕ ಡಾ. ಬಸವರಾಜ ಬೊಮ್ಮನಹಳ್ಳಿ, ರಾಷ್ಟ್ರೀಯ ವೈದ್ಯರ ದಿನಾಚರಣೆಯ ಮಹತ್ವವನ್ನು ವಿವರಿಸಿ, ಡಾ. ಬಿ.ಸಿ. ರಾಯ್ ಅವರ ಆದರ್ಶ ಸೇವೆ ಪ್ರತಿಯೊಬ್ಬ ವೈದ್ಯರಿಗೂ ಸ್ಫೂರ್ತಿಯಾಗಬೇಕು ಎಂದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಶಿವಪ್ರಕಾಶ್ ಎಸ್. ನೀಲಗುಂದ, ಖಾಸಗಿ ಆಸ್ಪತ್ರೆಗಳು ಕೆಪಿಎಂಇ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಪಾಲಿಸುವ ಅಗತ್ಯವನ್ನು ಒತ್ತಿ ಹೇಳಿದರು.

ಈ ಸಂದರ್ಭದಲ್ಲಿ ಐಎಂಎ ಗದಗ ಶತಮಾನೋತ್ಸವ ಸಮಿತಿ ಅಧ್ಯಕ್ಷ ಡಾ. ಎಸ್.ಆರ್. ನಾಗನೂರ, ಕಾರ್ಯದರ್ಶಿ ಡಾ. ರಾಹುಲ್ ಶಿರೋಳ, ಖಜಾಂಚಿ ಡಾ. ಜಯರಾಜ ಪಾಟೀಲ, ಐಎಂಎ ಲೇಡೀಸ್ ವಿಂಗ್ ಅಧ್ಯಕ್ಷೆ ಡಾ. ಸುನಿತಾ ಎಸ್. ಕುರಡಗಿ, ಖಜಾಂಚಿ ಡಾ. ಜ್ಯೋತಿ ಪಾಟೀಲ ಸೇರಿದಂತೆ ಜಿಲ್ಲೆಯ ವೈದ್ಯರು ಹಾಗೂ ವೈದ್ಯಕೀಯ ವೃತ್ತಿಪರರು ಉಪಸ್ಥಿತರಿದ್ದರು.

# ಹಿರಿಯ ನಾಗರಿಕರ ಗುರುತಿನ ಚೀಟಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಹಿರಿಯ ನಾಗರಿಕರ ಗುರುತಿನ ಚೀಟಿ ಪಡೆಯದೇ ಉಳಿದಿರುವ ಅರ್ಹ ಫಲಾನುಭವಿಗಳು ಕೂಡಲೇ ಅರ್ಜಿ ಸಲ್ಲಿಸುವಂತೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಮನವಿ ಮಾಡಿದೆ.

ಗುರುತಿನ ಚೀಟಿಗಾಗಿ ಸೇವಾ ಸಿಂಧು ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಗುರುತಿನ ಚೀಟಿ ಪಡೆದ ಹಿರಿಯ ನಾಗರಿಕರಿಗೆ ವಿಮಾನ ಮತ್ತು ರೈಲ್ವೆ ಪ್ರಯಾಣದ ಟಿಕೆಟ್ ದರದಲ್ಲಿ ರಿಯಾಯಿತಿ, ಬಸ್ ಪಾಸ್ ಹಾಗೂ ಬಸ್ ಪ್ರಯಾಣ ದರದಲ್ಲಿ ರಿಯಾಯಿತಿ, ಆದಾಯ ತೆರಿಗೆ ವಿನಾಯಿತಿ ಸೇರಿದಂತೆ ಹಿರಿಯ ನಾಗರಿಕರ ಪೋಷಣಾ ಭತ್ಯೆ ಸೇರಿದಂತೆ ವಿವಿಧ ಸೌಲಭ್ಯಗಳನ್ನು ಪಡೆಯಲು ಅವಕಾಶವಿದೆ.

ಹೆಚ್ಚಿನ ಮಾಹಿತಿಗಾಗಿ ಗದಗ ಜಿಲ್ಲಾಡಳಿತ ಭವನದ ಕೊಠಡಿ ಸಂಖ್ಯೆ 29ರಲ್ಲಿ ಕಾರ್ಯನಿರ್ವಹಿಸುತ್ತಿರುವ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯನ್ನು ಅಥವಾ 08372-220419 ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀದೇವಿ ಎಸ್.ಎನ್. ತಿಳಿಸಿದ್ದಾರೆ.

## ಆಕ್ಷೇಪಣೆಗೆ ಅವಕಾಶ

**ವಿಜಯಸಾಕ್ಷಿ ಸುದ್ದಿ, ಗದಗ**

ಹಲವು ವರ್ಷಗಳಿಂದ ಯಾವುದೇ ಚಟುವಟಿಕೆ ನಡೆಸದೆ ಸ್ಥಗಿತಗೊಂಡಿರುವ ಗದಗ ತಾಲೂಕಿನ ಮೂರು ಸಹಕಾರ ಸಂಘಗಳ ಸಮಾಪನೆ ಪ್ರಕ್ರಿಯೆ ಆರಂಭಗೊಂಡಿದ್ದು, ಸಂಘಗಳಿಗೆ ಸಂಬಂಧಿಸಿದ ಹಕ್ಕು, ಬಾಕಿ ಅಥವಾ ಆಕ್ಷೇಪಣೆಗಳಿದ್ದರೆ ಏಳು ದಿನಗಳೊಳಗೆ ಸಲ್ಲಿಸುವಂತೆ ಸಹಕಾರ ಸಂಘಗಳ ಉಪನಿಬಂಧಕರ ಕಚೇರಿ ಪ್ರಕಟಣೆ ತಿಳಿಸಿದೆ.

ಕುರುಹಿನ ಸಂದೇಶ ವಿವಿಧೋದ್ದೇಶಗಳ ಸಹಕಾರ ಸಂಘ ನಿ., ಬೆಟಗೇರಿ-ಗದಗ, ಶ್ರೀ ಸೇವಾಲಾಲ ಬಂಜಾರ ವಿವಿಧೋದ್ದೇಶಗಳ ಸಹಕಾರ ಸಂಘ ನಿ., ನಾಗಾವಿ ತಾಂಡಾ ಹಾಗೂ ಮಕರಜ್ಯೋತಿ ವಿವಿಧೋದ್ದೇಶಗಳ ಸಹಕಾರ ಸಂಘ ನಿ., ಗದಗ ತಮ್ಮ ಬೈಲಾದ ಉದ್ದೇಶಗಳಂತೆ ಕಾರ್ಯನಿರ್ವಹಿಸದೆ ಹಲವು ವರ್ಷಗಳಿಂದ ನಿಷ್ಕ್ರಿಯವಾಗಿರುವ ಹಿನ್ನೆಲೆಯಲ್ಲಿ ಸಮಾಪನಾ ಆದೇಶ ಹೊರಡಿಸಿ ಸಮಾಪನಾಧಿಕಾರಿಯನ್ನು ನೇಮಕ ಮಾಡಲಾಗಿದೆ.

ಪ್ರಸ್ತುತ ಈ ಸಂಘಗಳು ನೋಂದಾಯಿತ ವಿಳಾಸಗಳಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. ಆಡಳಿತ ಮಂಡಳಿ ಸದಸ್ಯರು ಹಾಗೂ ಕಾರ್ಯದರ್ಶಿಗಳ ಬಗ್ಗೆ ಮಾಹಿತಿ ಲಭ್ಯವಿಲ್ಲದ ಕಾರಣ, ಸಂಘಗಳಿಗೆ ಯಾರಾದರೂ ಹಣ ಪಡೆಯಬೇಕಿದ್ದರೂ ಅಥವಾ ಸಂಘಕ್ಕೆ ಹಣ ನೀಡಬೇಕಿದ್ದರೂ ಸಂಬಂಧಿತ ಮೂಲ ದಾಖಲೆಗಳೊಂದಿಗೆ ಪ್ರಕಟಣೆ ಹೊರಬಿದ್ದ ದಿನದಿಂದ ಏಳು ದಿನಗಳೊಳಗೆ ಸಹಕಾರ ಅಭಿವೃದ್ಧಿ ಅಧಿಕಾರಿ ಹಾಗೂ ಸಮಾಪನಾಧಿಕಾರಿ ವಿ.ವೈ. ಹಬೀಬ, ಸಹಕಾರ ಸಂಘಗಳ ಉಪನಿಬಂಧಕರ ಕಚೇರಿ, ಕೊಠಡಿ ಸಂಖ್ಯೆ 125, ಜಿಲ್ಲಾಡಳಿತ ಭವನ, ಹುಬ್ಬಳ್ಳಿ ರಸ್ತೆ, ಗದಗ ಅವರನ್ನು ಸಂಪರ್ಕಿಸುವಂತೆ ಸೂಚಿಸಲಾಗಿದೆ.

ನಿಗದಿತ ಅವಧಿಯಲ್ಲಿ ಯಾವುದೇ ಆಕ್ಷೇಪಣೆ ಸಲ್ಲಿಕೆಯಾಗದಿದ್ದರೆ, ಆಕ್ಷೇಪಣೆಗಳಿಲ್ಲ ಎಂದು ಪರಿಗಣಿಸಿ ಮೂರು ಸಂಘಗಳ ನೋಂದಣಿಯನ್ನು ನಿಯಮಾನುಸಾರ ರದ್ದುಪಡಿಸುವ ಪ್ರಕ್ರಿಯೆ ಕೈಗೊಳ್ಳಲಾಗುವುದು. ನಂತರ ಸಲ್ಲಿಕೆಯಾಗುವ ಯಾವುದೇ ಆಕ್ಷೇಪಣೆಯನ್ನು ಪರಿಗಣಿಸಲಾಗುವುದಿಲ್ಲ ಎಂದು ಪ್ರಕಟಣೆಯಲ್ಲಿ ಎಚ್ಚರಿಸಲಾಗಿದೆ.

# ಸಾಧನೆಗೆ ಅಂಗವೈಕಲ್ಯ ಎಂದಿಗೂ ಅಡ್ಡಿಯಲ್ಲ..!

## ನಿಷ್ಠೆ, ಪ್ರಾಮಾಣಿಕ ಸೇವೆಯಿಂದ ಗುರುತಿಸಿಕೊಂಡ ಮಲ್ಲಪ್ಪ ಹರಿಜನಗೆ ತೋಂಟದಾರ್ಯ ವಿದ್ಯಾಪೀಠದ ಅಭಿನಂದನೆ

**ವಿಜಯಸಾಕ್ಷಿ ಸುದ್ದಿ, ಡಂಬಳ**



ಅಂಗವೈಕಲ್ಯವನ್ನು ಸೋಲಿಸಿ, ಕಾಯಕವನ್ನೇ ಕೈಲಾಸವೆಂದು ನಂಬಿ ಮೂರು ದಶಕಗಳ ಕಾಲ ಶಿಕ್ಷಣ ಸಂಸ್ಥೆಯಲ್ಲಿ ನಿಷ್ಠೆಯಿಂದ ಸೇವೆ ಸಲ್ಲಿಸಿದ ಮಲ್ಲಪ್ಪ ಕೆಂಚಮ್ಮ ಹರಿಜನ ಅವರಿಗೆ ಡಂಬಳದ ಶ್ರೀ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದಲ್ಲಿ ಭಾವಪೂರ್ಣ ಬೀಳ್ಕೊಡುಗೆ ನೀಡಲಾಯಿತು.

ತೋಂಟದಾರ್ಯ ವಿದ್ಯಾಪೀಠದ ಬಾಲಕಿಯರ ಹಾಗೂ ಬಾಲಕರ ಪ್ರೌಢಶಾಲೆಯಲ್ಲಿ ದ್ವಿತೀಯ ದರ್ಜೆ ಸಹಾಯಕರಾಗಿ 30 ವರ್ಷಗಳ ಕಾಲ ಸೇವೆ ಸಲ್ಲಿಸಿ ನಿವೃತ್ತರಾದ ಮಲ್ಲಪ್ಪ ಹರಿಜನ ಅವರ ಅಭಿನಂದನಾ ಸಮಾರಂಭದಲ್ಲಿ ಮಾತನಾಡಿದ ತೋಂಟದಾರ್ಯ ಮಠದ ವ್ಯವಸ್ಥಾಪಕ ಜಿ.ವಿ. ಹಿರೇಮಠ, ಅಂಗವೈಕಲ್ಯವು ವ್ಯಕ್ತಿಯ ದೇಹಕ್ಕೆ ಮಾತ್ರ ಸೀಮಿತವಾಗಿರಬಹುದು. ಆದರೆ ಆತ್ಮವಿಶ್ವಾಸ, ಧೈರ್ಯ, ಪರಿಶ್ರಮ ಮತ್ತು ಕರ್ತವ್ಯನಿಷ್ಠೆಗೆ ಅದು ಎಂದಿಗೂ ಅಡ್ಡಿಯಾಗುವುದಿಲ್ಲ ಎಂಬುದನ್ನು ಮಲ್ಲಪ್ಪ ತಮ್ಮ ಜೀವನದ ಮೂಲಕ ಸಾಬೀತುಪಡಿಸಿದ್ದಾರೆ ಎಂದು ಹೇಳಿದರು.

ಬಾಲ್ಯದಿಂದಲೇ ಹಲವು ಸವಾಲುಗಳನ್ನು ಎದುರಿಸಿದ ಮಲ್ಲಪ್ಪ ಹರಿಜನ, ತಾಯಿಯ ಹಾಗೂ ಸಹೋದರರ ಪ್ರೋತ್ಸಾಹದಿಂದ ಉನ್ನತ ಶಿಕ್ಷಣ ಪಡೆದು, ಲಿಂ. ತೋಂಟದ ಸಿದ್ದಲಿಂಗ ಸ್ವಾಮೀಜಿಗಳ ಆಶೀರ್ವಾದ ಮತ್ತು ಸಂಸ್ಥೆಯ ಆಡಳಿತಾಧಿಕಾರಿ ಎಸ್.ಎಸ್. ಪಟ್ಟಣಶೆಟ್ಟರ ಅವರ ಪ್ರೇರಣೆಯಿಂದ ವಿದ್ಯಾಪೀಠದಲ್ಲಿ ಸೇವೆ ಆರಂಭಿಸಿದರು.

> ಕರ್ತವ್ಯದ ಮೇಲಿನ ಪ್ರೀತಿ ಮತ್ತು ಆತ್ಮವಿಶ್ವಾಸ ಇದ್ದರೆ ದೈಹಿಕ ನ್ಯೂನತೆಗಳು ಸಾಧನೆಯ ಮುಂದೆ ತಲೆಬಾಗುತ್ತವೆ.
> – ಜಿ.ವಿ. ಹಿರೇಮಠ, ವ್ಯವಸ್ಥಾಪಕ, ತೋಂಟದಾರ್ಯ ಮಠ

ಮೂರು ದಶಕಗಳ ಕಾಲ ಪ್ರಾಮಾಣಿಕತೆ ಮತ್ತು ಕರ್ತವ್ಯನಿಷ್ಠೆಯಿಂದ ಸೇವೆ ಸಲ್ಲಿಸಿರುವ ಅವರು ಇಂದಿನ ಯುವ ಪೀಳಿಗೆಗೆ ಪ್ರೇರಣೆಯಾಗಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಬಾಲಕಿಯರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರಾದ ಶ್ರೀಮತಿ ಎ.ಬಿ. ಬೇವಿನಕಟ್ಟಿ ಹಾಗೂ ಬಾಲಕರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಎ.ವಿ. ಹಿರೇಮಠ ಮಾತನಾಡಿ, ಇಚ್ಛಾಶಕ್ತಿ ಇದ್ದರೆ ಯಾವುದೇ ಅಡೆತಡೆಯೂ ಸಾಧನೆಯ ಹಾದಿಯನ್ನು ತಡೆಯಲಾರದು ಎಂಬುದನ್ನು ಮಲ್ಲಪ್ಪ ಹರಿಜನ ತಮ್ಮ ಬದುಕಿನ ಮೂಲಕ ತೋರಿಸಿಕೊಟ್ಟಿದ್ದಾರೆ. ನಿವೃತ್ತಿ ಎಂದರೆ ಸೇವೆಯ ಅಂತ್ಯವಲ್ಲ, ಬದುಕಿನ ಹೊಸ ಅಧ್ಯಾಯ. ಮುಂದಿನ ದಿನಗಳಲ್ಲಿ ಅವರು ಆರೋಗ್ಯ, ನೆಮ್ಮದಿ ಮತ್ತು ಸಂತೋಷದಿಂದ ಜೀವನ ಸಾಗಿಸಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ವತಿಯಿಂದ ಮಲ್ಲಪ್ಪ ಹರಿಜನ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ತೋಂಟದಾರ್ಯ ಸಂಯುಕ್ತ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಎಂ.ಬಿ. ಮಡಿವಾಳರ, ಬಸವೇಶ್ವರ ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಯ ಮುಖ್ಯಶಿಕ್ಷಕಿ ಜ್ಯೋತಿ ಗೌಡರ, ಮುಖಂಡ ಮರಿಯಪ್ಪ ಸಿದ್ದಣ್ಣವರ, ಶಾಲೆಯ ಶಿಕ್ಷಕರು, ಉಪನ್ಯಾಸಕರು, ಸಿಬ್ಬಂದಿ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# 31 ವರ್ಷಗಳ ನಿಷ್ಠಾವಂತ ಸೇವೆಗೆ ಗೌರವದ ಬೀಳ್ಕೊಡುಗೆ




**ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ**

ಕೆಎಸ್ಆರ್‌ಟಿಸಿಯಲ್ಲಿ ಮೂರು ದಶಕಗಳಿಗೂ ಹೆಚ್ಚು ಕಾಲ ನಿಷ್ಠೆಯಿಂದ ಸೇವೆ ಸಲ್ಲಿಸಿ ನಿವೃತ್ತರಾದ ಬಸ್ ಚಾಲಕ ಬಸವರಾಜ ಅಂಗಡಿ ಅವರಿಗೆ ಗಜೇಂದ್ರಗಡ ಬಸ್ ಘಟಕದಲ್ಲಿ ಆತ್ಮೀಯ ಬೀಳ್ಕೊಡುಗೆ ಹಾಗೂ ಸನ್ಮಾನ ಕಾರ್ಯಕ್ರಮ ನಡೆಯಿತು.

31 ವರ್ಷಗಳ ಕಾಲ ಸಂಸ್ಥೆಯ ವಿವಿಧ ಘಟಕಗಳಲ್ಲಿ ಚಾಲಕರಾಗಿ ಸೇವೆ ಸಲ್ಲಿಸಿದ ಬಸವರಾಜ ಅಂಗಡಿ, ಶಿಸ್ತು, ಸಮಯಪಾಲನೆ ಮತ್ತು ಸುರಕ್ಷಿತ ಚಾಲನೆಯ ಮೂಲಕ ಸಹೋದ್ಯೋಗಿಗಳು ಹಾಗೂ ಪ್ರಯಾಣಿಕರ ವಿಶ್ವಾಸ ಗಳಿಸಿದ್ದರು. 2005ರಲ್ಲಿ ಉತ್ತಮ ಚಾಲಕ ಪ್ರಶಸ್ತಿ ಪಡೆದಿದ್ದ ಅವರು ಸೇವಾ ನಿವೃತ್ತಿ ಹೊಂದಿದ ಹಿನ್ನೆಲೆಯಲ್ಲಿ ಘಟಕದ ಚಾಲಕರು, ನಿರ್ವಾಹಕರು ಹಾಗೂ ಸಿಬ್ಬಂದಿ ಅಭಿನಂದಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅಧಿಕಾರಿಗಳು, ಬಸವರಾಜ ಅಂಗಡಿ ಅವರು ಕರ್ತವ್ಯನಿಷ್ಠೆ, ಪ್ರಾಮಾಣಿಕತೆ ಮತ್ತು ವಿನಯಶೀಲತೆಯಿಂದ ಸಂಸ್ಥೆಯ ಗೌರವ ಹೆಚ್ಚಿಸಿದ ಸಿಬ್ಬಂದಿಯಾಗಿದ್ದು, ಅವರ ಸೇವೆ ಯುವ ಚಾಲಕರಿಗೆ ಮಾದರಿಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ವಿಭಾಗೀಯ ನಿಯಂತ್ರಣಾಧಿಕಾರಿ ಟಿ.ವಿ. ಮೈತ್ರಿ, ಗಜೇಂದ್ರಗಡ ಘಟಕ ವ್ಯವಸ್ಥಾಪಕ ಕೆ.ಎಸ್. ಜಿಗಳೂರ, ಸಿಬ್ಬಂದಿಗಳಾದ ಎಸ್.ಜಿ. ಜೇಡ್ರಾಮಕುಂಟಿ, ಡಿ.ವೈ. ನಾಲಬಂದ, ಮುಖಂಡರಾದ ಉಮೇಶ ಮೇಣಸಗಿ, ದೊಡ್ಡ ಬಸವರಾಜ ಅಂಗಡಿ ಸೇರಿದಂತೆ ಹಲವರು ಉಪಸ್ಥಿತರಿದ್ದು, ನಿವೃತ್ತ ಜೀವನ ಸುಖ, ಆರೋಗ್ಯ ಮತ್ತು ನೆಮ್ಮದಿಯಿಂದ ಕೂಡಿರಲಿ ಎಂದು ಶುಭ ಹಾರೈಸಿದರು.

### 33 ದಿನಗಳ ಶಿವಯೋಗ ಸಮಾಧಿಗೆ ಜು.5ರಂದು ಮಹಾಮಂಗಳೋತ್ಸವ

# ಅಂತೂರ-ಬೆಂತೂರ ಬೂದೀಶ್ವರ ಮಠದಲ್ಲಿ ರಾಚೋಟೇಶ್ವರ ಶ್ರೀಗಳ ತಪಸ್ಸಿಗೆ ಸಮಾಪ್ತಿ




**ವಿಜಯಸಾಕ್ಷಿ ಸುದ್ದಿ, ಗದಗ**

ತಾಲೂಕಿನ ಅಂತೂರ-ಬೆಂತೂರ ಗ್ರಾಮದ ಬೂದೀಶ್ವರ ಸಂಸ್ಥಾನಮಠದಲ್ಲಿ ರಾಚೋಟೇಶ್ವರ ಶಿವಾಚಾರ್ಯರ 60ನೇ ಮೌನಾನುಷ್ಠಾನ ಹಾಗೂ 16ನೇ ಶಿವಯೋಗ ಸಮಾಧಿಯ ಮುಕ್ತಾಯ ಮಹಾಮಂಗಳೋತ್ಸವ ಜುಲೈ 5ರಂದು ಬೆಳಿಗ್ಗೆ 10 ಗಂಟೆಗೆ ನಡೆಯಲಿದೆ ಎಂದು ಪ್ರವಚನಕಾರ ಮಡಿವಾಳಯ್ಯ ಶಾಸ್ತ್ರಿ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಹಾರ, ನೀರು, ಗಾಳಿ ಹಾಗೂ ಬೆಳಕಿಲ್ಲದ ಸ್ಥಳದಲ್ಲಿ 33 ದಿನಗಳ ಕಾಲ ತಪಸ್ಸು ಆಚರಿಸಿರುವ ರಾಚೋಟೇಶ್ವರ ಶ್ರೀಗಳು ಜುಲೈ 5ರಂದು ಬೆಳಿಗ್ಗೆ 9.30ಕ್ಕೆ ಸಮಾಧಿ ಸ್ಥಳದಿಂದ ಹೊರಬಂದು ಭಕ್ತರಿಗೆ ದರ್ಶನ ನೀಡಲಿದ್ದಾರೆ ಎಂದು ಹೇಳಿದರು.

ಜೂನ್ 2ರಿಂದ ಆರಂಭಗೊಂಡಿರುವ ಭೀಮಕವಿ ವಿರಚಿತ ಬಸವೇಶ್ವರ ಪುರಾಣ ಪ್ರವಚನ ಜುಲೈ 4ರಂದು ಮಹಾಮಂಗಲದೊಂದಿಗೆ ಮುಕ್ತಾಯಗೊಳ್ಳಲಿದೆ. ಜುಲೈ 1ರಿಂದ 4ರವರೆಗೆ ವಿಶೇಷ ಪೂಜೆ, 775 ಶಿವಲಿಂಗಗಳ ಪ್ರತಿಷ್ಠಾಪನೆ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆದಿದ್ದು, ಜುಲೈ 5ರಂದು ಬೂದೀಶ್ವರರ ವಿಗ್ರಹ ಪ್ರತಿಷ್ಠಾಪನೆ ನೆರವೇರಲಿದೆ ಎಂದರು.

ಜುಲೈ 1ರಂದು ಷಟಸ್ಥಲ ಧ್ವಜಾರೋಹಣ ಹಾಗೂ 775 ಶಿವಲಿಂಗ ಪ್ರತಿಷ್ಠಾಪನೆ, ಜುಲೈ 2 ಮತ್ತು 3ರಂದು ಧರ್ಮಸಭೆಗಳು, ಜುಲೈ 4ರಂದು ಬಸವಪುರಾಣ ಮಹಾಮಂಗಲೋತ್ಸವ ನಡೆಯಲಿದೆ. ವಿವಿಧ ದಿನಗಳಲ್ಲಿ ದೇವರಹಿಪ್ಪರಗಿ ಜಡೇಮಠದ ಜಡೇಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ, ಶಿರಹಟ್ಟಿ ಫಕೀರ ಸಿದ್ಧರಾಮ ಸ್ವಾಮೀಜಿ, ಕೊಣ್ಣೂರ ಸಿದ್ಧಲಿಂಗ ಶಿವಾಚಾರ್ಯರು, ಡಾ. ತೋಂಟದ ಸಿದ್ಧರಾಮ ಸ್ವಾಮೀಜಿ ಸೇರಿದಂತೆ ಹಲವು ಮಠಾಧೀಶರು ಪಾಲ್ಗೊಳ್ಳಲಿದ್ದಾರೆ ಎಂದು ವಿವರಿಸಿದರು.

ಜುಲೈ 5ರಂದು ನಡೆಯುವ ಶಿವಯೋಗ ಸಮಾಧಿ ಮಹಾಮಂಗಳೋತ್ಸವ ಹಾಗೂ ಬೂದೀಶ್ವರರ ವಿಗ್ರಹ ಪ್ರತಿಷ್ಠಾಪನಾ ಕಾರ್ಯಕ್ರಮದಲ್ಲಿ ಮುಂಡರಗಿ ಅನ್ನದಾನೇಶ್ವರ ಮಠದ ಜಗದ್ಗುರು ಡಾ. ನಾಡೋಜ ಅನ್ನದಾನೇಶ್ವರ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದು, ರಾಚೋಟೇಶ್ವರ ಶಿವಾಚಾರ್ಯರು ನೇತೃತ್ವ ವಹಿಸಲಿದ್ದಾರೆ. ಶಾಸಕ ಎಚ್.ಕೆ. ಪಾಟೀಲ ಅಧ್ಯಕ್ಷತೆ ವಹಿಸಲಿದ್ದು, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ದೇವರಹಿಪ್ಪರಗಿ ಜಡೇಸಿದ್ದೇಶ್ವರ ಸ್ವಾಮೀಜಿ ಮಾತನಾಡಿ, ಲೋಕಕಲ್ಯಾಣ, ಯೋಧರು ಹಾಗೂ ರೈತರ ಶ್ರೇಯೋಭಿವೃದ್ಧಿಗಾಗಿ ರಾಚೋಟೇಶ್ವರ ಶ್ರೀಗಳು ಶಿವಯೋಗ ಸಮಾಧಿ ಕೈಗೊಂಡಿದ್ದಾರೆ. ಮುಕ್ತಾಯ ಸಮಾರಂಭಕ್ಕೆ ಆಂಧ್ರಪ್ರದೇಶ, ತೆಲಂಗಾಣ ಹಾಗೂ ಮಹಾರಾಷ್ಟ್ರದಿಂದಲೂ ಸಾವಿರಾರು ಭಕ್ತರು ಆಗಮಿಸುವ ನಿರೀಕ್ಷೆಯಿದೆ ಎಂದು ಹೇಳಿದರು.

ಮಹಾಲಿಂಗಪುರದ ಗುರುಲಿಂಗ ದೇವರು ಮಾತನಾಡಿ, ಜುಲೈ 6ರಂದು ಬೆಳಿಗ್ಗೆ 5 ಗಂಟೆಗೆ "ದುಶ್ಚಟಗಳ ಭಿಕ್ಷೆ?ಸದ್ಗುಣಗಳ ದೀಕ್ಷೆ" ಎಂಬ ಸಂಕಲ್ಪದೊಂದಿಗೆ ಬೂದೀಶ್ವರ ಮಠದಿಂದ ಉಳವಿ ಚನ್ನಬಸವೇಶ್ವರ ದೇವಸ್ಥಾನದವರೆಗೆ ಧರ್ಮಜಾಗೃತಿ ಪಾದಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಎಸ್.ಕೆ. ಆಲೂರು, ಮಂಜುನಾಥ ಮಜ್ಜಿಗುಡ್ಡ, ಬೂದಪ್ಪ ಜಿಣಗಿ ಹಾಗೂ ಮಂಜುನಾಥ ಬಾವಿಕಟ್ಟಿ ಉಪಸ್ಥಿತರಿದ್ದರು.

# ಚಾರ್ಟರ್ಡ್ ಅಕೌಂಟೆಂಟ್ ದಿನಕ್ಕೆ ಮಾನವೀಯ ಸ್ಪರ್ಶ

## ಬುದ್ಧಿಮಾಂದ್ಯ ಮಕ್ಕಳ ಶಾಲೆಗೆ ಅಗತ್ಯ ವಸ್ತುಗಳ ಕೊಡುಗೆ; ಸಮಾಜಮುಖಿ ಸೇವೆಗೆ ಮೆಚ್ಚುಗೆ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**




ರಾಷ್ಟ್ರೀಯ ಚಾರ್ಟರ್ಡ್ ಅಕೌಂಟೆನ್ಸಿ ದಿನಾಚರಣೆಯನ್ನು ವಿಜಯನಗರ ಚಾರ್ಟರ್ಡ್ ಅಕೌಂಟೆಂಟ್ಸ್ ಜಿಲ್ಲಾ ಘಟಕವು ಸಮಾಜಮುಖಿ ಕಾರ್ಯಕ್ರಮಗಳೊಂದಿಗೆ ಅರ್ಥಪೂರ್ಣವಾಗಿ ಆಚರಿಸಿತು.

ಪಟ್ಟಣದ ಸಾಧ್ಯಾ ಟ್ರಸ್ಟ್ ಫಾರ್ ಸೋಷಿಯಲ್ ಡೆವಲಪ್‌ಮೆಂಟ್ (ರಿ) ನಡೆಸುತ್ತಿರುವ ಬುದ್ಧಿಮಾಂದ್ಯ ಮಕ್ಕಳ ವಿಶೇಷ ಶಾಲೆಯಲ್ಲಿ ನಡೆದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಚಾರ್ಟರ್ಡ್ ಅಕೌಂಟೆಂಟ್ ಸೀನಂ ಭಟ್, ದೇಶದ ಆರ್ಥಿಕ ವ್ಯವಸ್ಥೆಯನ್ನು ಸದೃಢಗೊಳಿಸುವಲ್ಲಿ ಚಾರ್ಟರ್ಡ್ ಅಕೌಂಟೆಂಟ್‌ಗಳ ಪಾತ್ರ ಮಹತ್ವದ್ದಾಗಿದೆ. ಹಣಕಾಸಿನ ಶಿಸ್ತು, ಪಾರದರ್ಶಕತೆ ಹಾಗೂ ನಿಖರ ಲೆಕ್ಕಪತ್ರ ನಿರ್ವಹಣೆಯ ಮೂಲಕ ಉತ್ತಮ ಆಡಳಿತ ವ್ಯವಸ್ಥೆ ನಿರ್ಮಾಣವಾಗುತ್ತದೆ ಎಂದು ಹೇಳಿದರು.

ವಿಶೇಷ ಚೇತನ ಮಕ್ಕಳ ಶಿಕ್ಷಣ, ಆರೈಕೆ, ತರಬೇತಿ ಹಾಗೂ ಸಬಲೀಕರಣಕ್ಕಾಗಿ ಸಾಧ್ಯಾ ಟ್ರಸ್ಟ್ ಸಲ್ಲಿಸುತ್ತಿರುವ ಸೇವೆ ಶ್ಲಾಘನೀಯವಾಗಿದೆ. ಸಮಾಜದ ಕಟ್ಟಕಡೆಯ ವ್ಯಕ್ತಿಯ ಅಭಿವೃದ್ಧಿಗೆ ಶ್ರಮಿಸುವ ಇಂತಹ ಸಂಸ್ಥೆಗಳಿಗೆ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಹಣಕಾಸಿನ ಜವಾಬ್ದಾರಿ ಮತ್ತು ಪಾರದರ್ಶಕ ಆಡಳಿತ ಯಾವುದೇ ಸಂಸ್ಥೆಯ ಬೆಳವಣಿಗೆಗೆ ಭದ್ರ ಬುನಾದಿಯಾಗಿದ್ದು, ವಿದ್ಯಾರ್ಥಿಗಳಲ್ಲಿ ಉಳಿತಾಯದ ಮನೋಭಾವ ಹಾಗೂ ಹಣಕಾಸಿನ ಅರಿವನ್ನು ಬಾಲ್ಯದಿಂದಲೇ ಬೆಳೆಸುವುದು ಅಗತ್ಯ ಎಂದು ಅಭಿಪ್ರಾಯಪಟ್ಟರು.

ದಿನಾಚರಣೆಯ ಅಂಗವಾಗಿ ವಿಶೇಷ ಶಾಲೆಗೆ ಎರಡು ನೀರಿನ ಟ್ಯಾಂಕ್‌ಗಳು, ಅಡುಗೆ ಸಾಮಗ್ರಿಗಳು ಹಾಗೂ ಎರಡು ಚಹಾ ಬಾಕ್ಸ್‌ಗಳನ್ನು ಕೊಡುಗೆಯಾಗಿ ನೀಡಲಾಯಿತು. ಬಳಿಕ ಚಾರ್ಟರ್ಡ್ ಅಕೌಂಟೆಂಟ್ ವಿದ್ಯಾರ್ಥಿಗಳೊಂದಿಗೆ ಬೆರೆತು ಅವರ ಯೋಗಕ್ಷೇಮ ವಿಚಾರಿಸಿ ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಚಾರ್ಟರ್ಡ್ ಅಕೌಂಟೆಂಟ್ ರವೀಂದ್ರನಾಥ ಗುಪ್ತ, ಸಿಎ ವೀಣಾ, ಸಿಎ ಸರ್ಪಭೂಷಣ, ಜಿ. ಅನಿತಾ, ಶೀಲಾ ರೆಡ್ಡಿ, ಸೋನಿ ಮಹೇಂದ್ರ, ಶ್ರೀಕಾಂತ್, ಜಿ. ವಿನಾಯಕ್, ಗವಿಸಿದ್ದಪ್ಪ, ಮಂಜುನಾಥ್, ಗುಂಡಿ ನಾಗರಾಜ್, ಬೋರಯ್ಯ, ರಾಜೇಶ್, ಶ್ರೀನಿವಾಸ್, ಅನಿಲ್ ಕುಮಾರ್, ಶಾಲೆಯ ಮುಖ್ಯಸ್ಥೆ ಆರತಿ, ಶಿಕ್ಷಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ದೃಶ್ಯಕಲಾ ಪದವಿ ಪ್ರವೇಶಕ್ಕೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಮೈಸೂರಿನ ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜಿನಲ್ಲಿ 2026-27ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ಬಿ.ವಿ.ಎ. (ಬ್ಯಾಚುಲರ್ ಆಫ್ ವಿಷುವಲ್ ಆರ್ಟ್ಸ್) ಪದವಿ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ದ್ವಿತೀಯ ಪಿಯುಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅಭ್ಯರ್ಥಿಗಳು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ (ಏಇಂ) ಯುಜಿಸಿಎಂಎಸ್ (ಗಉಅಒಖ) ಪೋರ್ಟಲ್ ಮೂಲಕ ಜುಲೈ 4ರೊಳಗೆ ಅರ್ಜಿ ಸಲ್ಲಿಸಬಹುದು.


ನಾಲ್ಕು ವರ್ಷದ ಎಂಟು ಸೆಮಿಸ್ಟರ್‌ಗಳ ರಾಜ್ಯ ಶಿಕ್ಷಣ ನೀತಿಯಡಿ ನಡೆಯುವ ಈ ಪದವಿಯಲ್ಲಿ ಚಿತ್ರಕಲೆ, ಶಿಲ್ಪಕಲೆ, ಗ್ರಾಫಿಕ್ಸ್ (ಅಚ್ಚುಕಲೆ), ಅನ್ವಯಕಲೆ, ಕಲಾ ಇತಿಹಾಸ ಹಾಗೂ ಛಾಯಾಚಿತ್ರ ಮತ್ತು ಛಾಯಾಚಿತ್ರ ಪತ್ರಿಕೋದ್ಯಮ ವಿಷಯಗಳಲ್ಲಿ ವಿಶೇಷ ಅಧ್ಯಯನಕ್ಕೆ ಅವಕಾಶ ಕಲ್ಪಿಸಲಾಗಿದೆ.

ಅರ್ಜಿ ಸಲ್ಲಿಸಿದ ಅಭ್ಯರ್ಥಿಗಳ ಆಯ್ಕೆಗಾಗಿ ಜುಲೈ 6ರಂದು ಅರ್ಹತಾ ಪರೀಕ್ಷೆ ಹಾಗೂ ವೈಯಕ್ತಿಕ ಸಂದರ್ಶನ ನಡೆಸಲಾಗುವುದು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ 0821-2438931 ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದು ಎಂದು ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜಿನ ಡೀನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ಸರ್ಕಾರಿ ಶಾಲಾ ಪ್ರತಿಭಾವಂತರಿಗೆ ಗೌರವ

**ವಿಜಯಸಾಕ್ಷಿ ಸುದ್ದಿ, ಗದಗ**



ಗದಗದ ಶಿಕ್ಷಣಪ್ರೇಮಿ, ತ್ಯಾಗಜೀವಿ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ವತಿಯಿಂದ ಗದಗ ತಾಲೂಕಿನ ಸರ್ಕಾರಿ ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡಿ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಮೊದಲ ಐದು ಸ್ಥಾನ ಪಡೆದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಇಂದಿನಿಂದ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುತ್ತಿದೆ.

ಪ್ರತಿಷ್ಠಾನದ ಗೌರವಾಧ್ಯಕ್ಷ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ಮಾರ್ಗದರ್ಶನದಲ್ಲಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಶಾಲೆಗಳ ಮುಖ್ಯೋಪಾಧ್ಯಾಯರು ಹಾಗೂ ಪ್ರತಿಷ್ಠಾನದ ಪದಾಧಿಕಾರಿಗಳ ಸಹಯೋಗದಲ್ಲಿ ಈ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್. ಪಾಟೀಲ ತಿಳಿಸಿದ್ದಾರೆ.

ಪ್ರತಿಷ್ಠಾನವು ಗದಗ ನಗರ ಹಾಗೂ ತಾಲೂಕಿನ 30 ಸರ್ಕಾರಿ ಪ್ರೌಢಶಾಲೆಗಳಿಗೆ ಭೇಟಿ ನೀಡಿ, ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ ಮೊದಲ ಐದು ಸ್ಥಾನ ಪಡೆದ ಸುಮಾರು 150 ವಿದ್ಯಾರ್ಥಿಗಳನ್ನು ಮುಂದಿನ 10 ದಿನಗಳ ಅವಧಿಯಲ್ಲಿ ಸನ್ಮಾನಿಸಿ ಪ್ರತಿಭಾ ಪುರಸ್ಕಾರ ಪ್ರದಾನ ಮಾಡಲಿದೆ.

ಮೊದಲ ಹಂತದ ಕಾರ್ಯಕ್ರಮ ಇಂದು (ಜುಲೈ 3) ನಡೆಯಲಿದ್ದು, ಬೆಳಿಗ್ಗೆ 10 ಗಂಟೆಗೆ ಕೋಟುಮಚಗಿ ಸರ್ಕಾರಿ ಪ್ರೌಢಶಾಲೆ, ಮಧ್ಯಾಹ್ನ 12 ಗಂಟೆಗೆ ನೀರಲಗಿ ಸರ್ಕಾರಿ ಪ್ರೌಢಶಾಲೆ, ಮಧ್ಯಾಹ್ನ 2 ಗಂಟೆಗೆ ಕಣಗಿನಹಾಳ ಸರ್ಕಾರಿ ಪ್ರೌಢಶಾಲೆ, ಮಧ್ಯಾಹ್ನ 3 ಗಂಟೆ-ಗೆ ಕಣಗಿನಹಾಳ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಸಂಜೆ 4 ಗಂಟೆಗೆ ಹಾತಲಗೇರಿ ಸರ್ಕಾರಿ ಪ್ರೌಢಶಾಲೆ (ಕಸ್ತೂರಬಾ ಒಕ್ಕೂಟ ಶಾಲೆ)ಯಲ್ಲಿ ಪ್ರತಿಭಾ ಪುರಸ್ಕಾರ ಸಮಾರಂಭಗಳು ನಡೆಯಲಿವೆ.

ಶಿಕ್ಷಣದಲ್ಲಿ ಸಾಧನೆ ಮಾಡಿದ ಸರ್ಕಾರಿ ಶಾಲೆಗಳ ವಿದ್ಯಾರ್ಥಿಗಳನ್ನು ಗುರುತಿಸಿ ಗೌರವಿಸುವ ಮೂಲಕ ಮತ್ತಷ್ಟು ವಿದ್ಯಾರ್ಥಿಗಳಿಗೆ ಪ್ರೇರಣೆ ನೀಡುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಶಿವಕುಮಾರ ಎಚ್. ಪಾಟೀಲ ತಿಳಿಸಿದ್ದಾರೆ.

# ಫಿಲ್ಮ್ ಸಿಟಿಗೆ 500 ಕೋಟಿ, ಕಲಾವಿದರ ವಸತಿ ಯೋಜನೆಗೆ 5 ಎಕರೆ ಭೂಮಿ ನೀಡಲು ಮನವಿ


## ಚಲನಚಿತ್ರ ವಾಣಿಜ್ಯ ಮಂಡಳಿ ಬೇಡಿಕೆಗೆ ಸಕಾರಾತ್ಮಕವಾಗಿ ಸ್ಪಂದಿಸಿದ ಸಿಎಂ

**ಬೆಂಗಳೂರು:** ಕನ್ನಡ ಚಿತ್ರರಂಗದ ಉಳಿವು ಹಾಗೂ ಅಭಿವೃದ್ಧಿಗಾಗಿ ಸಮಗ್ರ ಹೊಸ ಚಲನಚಿತ್ರ ನೀತಿ ಜಾರಿ ಸೇರಿದಂತೆ ವಿವಿಧ ಬೇಡಿಕೆಗಳಿಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ.

ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷರಾದ ಡಾ. ಜಯಮಾಲ ಅವರ ನೇತೃತ್ವದ ನಿಯೋಗವು ಮುಖ್ಯಮಂತ್ರಿಯವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿತು.

ಚಿತ್ರರಂಗದ ಸರ್ವತೋಮುಖ ಏಳಿಗೆಗಾಗಿ ಸಿನಿಮಾ ಪ್ರಾಚ್ಯಾಗಾರ (ಆರ್ಕೈವ್) ಸ್ಥಾಪನೆ, ಸಹಾಯಧನ ಹೆಚ್ಚಳ, ಸರ್ಕಾರದ ವತಿಯಿಂದಲೇ ಪ್ರತ್ಯೇಕ ಓಟಿಟಿ ವೇದಿಕೆ ಆರಂಭ, ಸಿನಿಮಾಟೋಗ್ರಫಿ ಕಾಯ್ದೆ ತಿದ್ದುಪಡಿ ಹಾಗೂ ಏಕಪರದೆ ಚಿತ್ರಮಂದಿರಗಳ ನವೀಕರಣ ಮತ್ತು ಆಧುನೀಕರಣಕ್ಕೆ ವಿಶೇಷ ಆರ್ಥಿಕ ನೆರವು ನೀಡುವಂತೆ ವಾಣಿಜ್ಯ ಮಂಡಳಿ ಪ್ರಮುಖವಾಗಿ ಒತ್ತಾಯಿಸಿದೆ.

ಇದರೊಂದಿಗೆ, ಚಿತ್ರರಂಗದ ಕಾರ್ಮಿಕರು ಮತ್ತು ಕಲಾವಿದರ ವಸತಿ ಯೋಜನೆಗಾಗಿ ಬಿಡಿಎ ವತಿಯಿಂದ 5 ಎಕರೆ ಭೂಮಿ ಮಂಜೂರು ಮಾಡಬೇಕೆಂದು ಮನವಿಯಲ್ಲಿ ಕೋರಲಾಗಿದೆ. ಚಲನಚಿತ್ರ ವಾಣಿಜ್ಯ ಮಂಡಳಿಯ ಅಹವಾಲುಗಳನ್ನು ಆಲಿಸಿದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಚಿತ್ರರಂಗದ ಉಳಿವಿಗಾಗಿ ಸರ್ಕಾರ ಎಲ್ಲ ರೀತಿಯ ನೆರವು ನೀಡಲು ಸಿದ್ಧವಿದೆ ಎಂದು ಭರವಸೆ ನೀಡಿ-ದರು. ಹೊಸ ಚಲನಚಿತ್ರ ನೀತಿ ತರುವ ಕುರಿತು ವಿಸ್ತೃತ ಚರ್ಚೆ ನಡೆಸುವುದಾಗಿ ತಿಳಿಸಿದ ಅವರು, ಬಾಕಿ ಉಳಿದಿರುವ ಚಲನಚಿತ್ರ ಪ್ರಶಸ್ತಿ ಪ್ರಕ್ರಿಯೆಯನ್ನು ತಕ್ಷಣವೇ ಆರಂಭಿಸಲು ಸೂಕ್ತ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.



ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದ ಸಿಎಂ, ಇನ್ನು ಬಹುಕಾಲದ ಕನಸಾದ 'ಚಿತ್ರನಗರಿ' ನಿರ್ಮಾಣಕ್ಕೆ ಈಗಾಗಲೇ ಘೋಷಣೆಯಾಗಿರುವ ಅನುದಾನವನ್ನು ಶೀಘ್ರವಾಗಿ ಬಿಡುಗಡೆ ಮಾಡುವಂತೆ ಹಣಕಾಸು ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳಿಗೆ ಸಿಎಂ ನಿರ್ದೇಶನ ನೀಡಿದ್ದಾರೆ. ಬಿಡಿಎ ವತಿಯಿಂದ 5 ಎಕರೆ ಭೂಮಿ ನೀಡುವ ಬೇಡಿಕೆ ಹಾಗೂ ಇತರೆ ಸೌಲಭ್ಯಗಳ ಕುರಿತಾಗಿ ನಿಯಮಾನುಸಾರ ಯಾವ ರೀತಿಯಲ್ಲಿ ಗರಿಷ್ಠ ಸಹಾಯ ಮಾಡಬಹುದು ಎನ್ನುವುದನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿಗಳು ಸ್ಪಷ್ಟಪಡಿಸಿದ್ದಾರೆ.

2011ರಲ್ಲಿ ರೂಪಿಸಿದ್ದ ಚಲನಚಿತ್ರ ನೀತಿಯನ್ನು ಇಂದಿಗೂ ಅನುಸರಿಸಲಾಗುತ್ತಿದೆ. ಕಳೆದ 15 ವರ್ಷದಲ್ಲಿ ತಂತ್ರಜ್ಞಾನ ವಿಚಾರವಾಗಿ ಸಾಕಷ್ಟು ಬದಲಾವಣೆ ಕಂಡಿದೆ. ಆದ ಕಾರಣ ಹೊಸ ನೀತಿಯಲ್ಲಿ ಓಟಿಟಿ ಮತ್ತು ಡಿಜಿಟಲ್ ವಿತರಣಾ ವ್ಯವಸ್ಥೆ, ಎಐ ಮತ್ತು ಹೊಸ ತಂತ್ರಜ್ಞಾನ ಬಳಕೆ, ಕನ್ನಡ ಚಿತ್ರರಂಗ ರಕ್ಷಣೆ, ಸಣ್ಣ ಚಿತ್ರಗಳಿಗೆ ಪ್ರೋತ್ಸಾಹ, ಚಿತ್ರಮಂದಿರಗಳ ಉಳಿವು, ಕಲಾವಿದರು ಮತ್ತು ಕಾರ್ಮಿಕರ ಕಲ್ಯಾಣ, ಚಲನಚಿತ್ರ ಶಿಕ್ಷಣ ಮತ್ತು ಆರ್ಕೈವ್, ಜಾಗತಿಕ ಮಾರುಕಟ್ಟೆ ವಿಸ್ತರಣೆ ಬಗ್ಗೆ ಬದಲಾವಣೆ ತರಬೇಕು. ಪ್ರತಿವರ್ಷ 250 ಕ್ಕೂ ಹೆಚ್ಚು ಕನ್ನಡ ಚಿತ್ರಗಳು ಬಿಡುಗಡೆಯಾಗುತ್ತೆ. ಅನೇಕ ಓಟಿಟಿ ವೇದಿಕೆಗಳು ಬಹುರಾಷ್ಟ್ರೀಯ ಕಂಪೆನಿಗಳಾಗಿರುವ ಕಾರಣಕ್ಕೆ ಸಣ್ಣ ಮೊತ್ತದ ಸಿನಿಮಾಗಳು ಎಂದು ಖರೀದಿ ಮಾಡುತ್ತಿಲ್ಲ ಆದ ಕಾರಣಕ್ಕೆ ಸರ್ಕಾರದಿಂದಲೇ ಸರ್ಕಾರಿ ಓಟಿಟಿ ವೇದಿಕೆ ಪ್ರಾರಂಭಿಸಿ ಕನ್ನಡ ಚಿತ್ರರಂಗದ ಉಳಿವಿಗೆ ಸಹಕಾರಿಯಾಗಬಹುದು.

ಸಿನಿಮಾಟೋಗ್ರಫಿ ಕಾಯ್ದೆ ತಿದ್ದುಪಡಿ ಮೂಲಕ ಚಿತ್ರಮಂದಿರಗಳ ಲೈಸೆನ್ಸ್ ನವೀಕರಣಕ್ಕೆ ಏಕಗವಾಕ್ಷಿ ಯೋಜನೆ ತರಬೇಕು.

ಅನೇಕ ನಿಯಮಗಳು ಸೆಲ್ಯುಲಾಯ್ಡ್ ಕಾಲಕ್ಕೆ ಹೊಂದಿಕೆಯಾಗುವಂತಿದ್ದು ಡಿಜಿಟಲ್ ಯುಗಕ್ಕೆ ಅನ್ವಯವಾಗುವಂತೆ ಷರತ್ತುಗಳನ್ನು ರೂಪಿಸಬೇಕು.

ಈ ಮೊದಲು 1200 ಚಿತ್ರಮಂದಿರಗಳು ರಾಜ್ಯದಲ್ಲಿದ್ದವು. ಈಗ ಅವುಗಳ ಸಂಖ್ಯೆ 400 ಕ್ಕೆ ಕುಸಿದಿದೆ. ಆದ ಕಾರಣ ಹೊಸ ಬಡಾವಣೆ, ಗ್ರಾಮೀಣ ಪ್ರದೇಶದಲ್ಲಿ ಹೊಸ ಚಿತ್ರಮಂದಿರಗಳನ್ನು ನಿರ್ಮಿಸುವುದಕ್ಕೆ ವಿಶೇಷ ಪ್ರೋತ್ಸಾಹ, ತೆರಿಗೆ, ಮೂಲಸೌಕರ್ಯ ವ್ಯವಸ್ಥೆ ಮಾಡುವುದು.

# ಬೆಳೆವಿಮೆ ನೋಂದಣಿಗೆ ಹೊಸ ನಿಯಮ

ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬೀಮಾ ಯೋಜನೆ (ಪಿಎಂಎಫ್‌ಬಿವೈ) ಅಡಿಯಲ್ಲಿ 2026–27ನೇ ಸಾಲಿನ ಮುಂಗಾರು ಹಂಗಾಮಿನ ಬೆಳೆ ವಿಮೆಗೆ ನೋಂದಾಯಿಸಿಕೊಳ್ಳುವ ಸಾಲ ಪಡೆಯದ ರೈತರಿಗೆ ಸ್ವಯಂ ಘೋಷಣೆ ಕಡ್ಡಾಯಗೊಳಿಸಲಾಗಿದೆ.

ಕೆಲವು ಜಿಲ್ಲೆಗಳಲ್ಲಿ ಕೃಷಿ ಸಾಲ ಪಡೆದ ರೈತರು ಮೊದಲು ಬ್ಯಾಂಕ್‌ಗಳಲ್ಲಿ ಆಪ್ಟ್ ಔಟ್ ಅರ್ಜಿ ಸಲ್ಲಿಸಿ, ಬಳಿಕ ಅದೇ ಜಮೀನು ಮತ್ತು ಬೆಳೆಗೆ ಸಾಲ ಪಡೆಯದ ರೈತರಂತೆ ಸಿಎಸ್‌ಸಿ ಹಾಗೂ ಗ್ರಾಮ ಒನ್ ಕೇಂದ್ರಗಳ ಮೂಲಕ ಬೆಳೆ ವಿಮೆಗೆ ನೋಂದಣಿ ಮಾಡಿಕೊಳ್ಳುತ್ತಿರುವ ಪ್ರಕರಣಗಳು ಕೇಂದ್ರ ಸರ್ಕಾರದ ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಈ ಕ್ರಮ ಜಾರಿಗೊಳಿಸಲಾಗಿದೆ.

ಇನ್ನು ಮುಂದೆ ಬೆಳೆ ವಿಮೆಗೆ ನೋಂದಾಯಿಸಿಕೊಳ್ಳುವ ಎಲ್ಲ ಸಾಲ ಪಡೆಯದ ರೈತರು, ಯಾವುದೇ ವಾಣಿಜ್ಯ ಬ್ಯಾಂಕ್, ಪ್ರಾದೇಶಿಕ ಗ್ರಾಮೀಣ ಬ್ಯಾಂಕ್, ಸಹಕಾರಿ ಬ್ಯಾಂಕ್ ಅಥವಾ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ (ಪಿಎಸಿಎಸ್) ಮೂಲಕ ಕಿಸಾನ್ ಕ್ರೆಡಿಟ್ ಕಾರ್ಡ್ (ಕೆಸಿಸಿ) ಅಥವಾ ಕೃಷಿ ಸಾಲ ಪಡೆದಿಲ್ಲ ಎಂಬುದನ್ನು ಸ್ವಯಂ ಘೋಷಣೆ ಪತ್ರದ ಮೂಲಕ ದೃಢೀಕರಿಸುವುದು ಕಡ್ಡಾಯವಾಗಿದೆ.

ಈ ಸ್ವಯಂ ಘೋಷಣೆ ನಮೂನೆಗಳು ಸಿಎಸ್‌ಸಿ ಹಾಗೂ ಗ್ರಾಮ ಒನ್ ಕೇಂದ್ರಗಳಲ್ಲಿ ಲಭ್ಯವಿದ್ದು, ಅರ್ಹ ರೈತರು ನಿಯಮಾನುಸಾರ ದಾಖಲೆ ಸಲ್ಲಿಸಿ ಬೆಳೆ ವಿಮೆಗೆ ನೋಂದಾಯಿಸಿಕೊಳ್ಳಬೇಕು ಎಂದು ಗದಗ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಲುಷಿತ ನೀರು ಪೂರೈಕೆಗೆ ಬ್ರೇಕ್ ಹಾಕಿ: ನಿರ್ಲಕ್ಷ್ಯಕ್ಕೆ ಅಧಿಕಾರಿಗಳೇ ಹೊಣೆ- ಸಿಇಒ ಎಚ್ಚರಿಕೆ

# ಕುಡಿಯುವ ನೀರಿನ ವಿಚಾರದಲ್ಲಿ ರಾಜಿಯಿಲ್ಲ..!

ವಿಜಯಸಾಕ್ಷಿ ಸುದ್ದಿ, ಧಾರವಾಡ

ಗ್ರಾಮೀಣ ಭಾಗದ ಜನರಿಗೆ ಶುದ್ಧ ಹಾಗೂ ಸುರಕ್ಷಿತ ಕುಡಿಯುವ ನೀರು ಒದಗಿಸುವುದು ಅಧಿಕಾರಿಗಳ ಮೊದಲ ಆದ್ಯತೆಯಾಗಬೇಕು. ನೀರಿನ ಗುಣಮಟ್ಟ ಪರಿಶೀಲನೆಯಲ್ಲಿ ಯಾವುದೇ ನಿರ್ಲಕ್ಷ್ಯ ಕಂಡುಬಂದರೂ ಅಥವಾ ಕಲುಷಿತ ನೀರು ಪೂರೈಕೆಯಾದರೂ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಎಚ್ಚರಿಕೆ ನೀಡಿದರು.

ಜಿಲ್ಲಾ ಪಂಚಾಯತ್ ಸಭಾಭವನದಲ್ಲಿ ಗುರುವಾರ ನಡೆದ ಜಿಲ್ಲಾ ಮಟ್ಟದ ನೀರು ಮತ್ತು ನೈರ್ಮಲ್ಯ ಸಮಿತಿ ಸಭೆ ಹಾಗೂ ಜಿಲ್ಲಾ ತಾಂತ್ರಿಕ ಅನುಮೋದನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಗ್ರಾಮೀಣ ಪ್ರದೇಶದಲ್ಲಿ ಜನರು ಬಳಸುವ ಕುಡಿಯುವ ನೀರಿನ ಗುಣಮಟ್ಟವನ್ನು ಕಾಲಕಾಲಕ್ಕೆ ಪರೀಕ್ಷಿಸಬೇಕು. ಬೋರ್‌ವೆಲ್ ನೀರನ್ನು ಕುಡಿಯಲು ಬಳಸುವ ಕಡೆಗಳಲ್ಲಿ ಅಗತ್ಯ ಸೂಚನಾ ಫಲಕ ಅಳವಡಿಸಬೇಕು.



ಶಾಲೆಗಳು, ಅಂಗನವಾಡಿಗಳು ಹಾಗೂ ಮನೆಗಳಿಗೆ ಸಮರ್ಪಕ ಪ್ರಮಾಣದಲ್ಲಿ ಶುದ್ಧ ಕುಡಿಯುವ ನೀರು ಪೂರೈಸುವುದು ಅಧಿಕಾರಿಗಳ ಜವಾಬ್ದಾರಿಯಾಗಿದ್ದು, ಈ ವಿಚಾರದಲ್ಲಿ ಯಾವುದೇ ನಿರ್ಲಕ್ಷ್ಯ ಸಹಿಸುವುದಿಲ್ಲ ಎಂದು ಸ್ಪಷ್ಟಪಡಿಸಿದರು.

ಜಿಲ್ಲೆಯ ಎಲ್ಲ ಶುದ್ಧ ಕುಡಿಯುವ ನೀರಿನ ಘಟಕಗಳು ಸುಸ್ಥಿತಿಯಲ್ಲಿರುವಂತೆ ನೋಡಿಕೊಳ್ಳಬೇಕು. ಈಗಾಗಲೇ ದುರಸ್ತಿ ಕಾರ್ಯ ನಡೆಯುತ್ತಿರುವ ಘಟಕಗಳ ಕಾಮಗಾರಿಯನ್ನು ಒಂದು ವಾರದೊಳಗೆ ಪೂರ್ಣಗೊಳಿಸಬೇಕು. ಗಡುವಿನೊಳಗೆ ಕೆಲಸ ಮುಗಿಸದ ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸುವುದು ಸೇರಿದಂತೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

> ಜನರಿಗೆ ಶುದ್ಧ ಕುಡಿಯುವ ನೀರು ಒದಗಿಸುವುದು ಸರ್ಕಾರದ ಯೋಜನೆ ಮಾತ್ರವಲ್ಲ, ಅಧಿಕಾರಿಗಳ ಹೊಣೆಗಾರಿ ಕೆಯೂ ಹೌದು. ನಿರ್ಲಕ್ಷ್ಯಕ್ಕೆ ಯಾವುದೇ ಕ್ಷಮೆ ಇಲ್ಲ.
>
> **ಭುವನೇಶ ಪಾಟೀಲ,**
> ಸಿಇಒ, ಜಿಲ್ಲಾ ಪಂಚಾಯತ್

ಜಲ ಜೀವನ್ ಮಿಷನ್ ಯೋಜನೆಯಡಿ ನಡೆಯುತ್ತಿರುವ ಕಾಮಗಾರಿಗಳ ಪ್ರಗತಿಯನ್ನು ಅಧಿಕಾರಿಗಳು ನಿರಂತರವಾಗಿ ಪರಾಮರ್ಶಿಸಬೇಕು. ಗ್ರಾಮಗಳಲ್ಲಿರುವ ಮೇಲ್ಮಟ್ಟದ ನೀರಿನ ಟ್ಯಾಂಕ್‌ಗಳನ್ನು ನಿಯಮಿತವಾಗಿ ಸ್ವಚ್ಛಗೊಳಿಸಿ, ಜನರಿಗೆ ಗುಣಮಟ್ಟದ ಕುಡಿಯುವ ನೀರು ತಲುಪುವಂತೆ ನೋಡಿಕೊಳ್ಳಬೇಕು ಎಂದು ಸೂಚಿಸಿದರು.

ತಾಲೂಕು ಮಟ್ಟದ ಸಭೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು ಕಡ್ಡಾಯವಾಗಿ ಹಾಜರಾಗಬೇಕು. ಕರ್ತವ್ಯ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರಿದರೆ ಶಿಸ್ತು ಕ್ರಮ ಎದುರಿಸಬೇಕಾಗುತ್ತದೆ. ಮುಂದಿನ ಸಭೆಗೆ ಎಲ್ಲ ಇಲಾಖೆಗಳ ಅಧಿಕಾರಿಗಳು ಸಮಗ್ರ ಮಾಹಿತಿ ಹಾಗೂ ಪ್ರಗತಿ ವರದಿಯೊಂದಿಗೆ ಹಾಜರಾಗಬೇಕು ಎಂದು ಭುವನೇಶ ಪಾಟೀಲ ನಿರ್ದೇಶನ ನೀಡಿದರು.

ಸಭೆಯಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯನಿರ್ವಾಹಕ ಎಂಜಿನಿಯರ್ ಜಗದೀಶ ಪಾಟೀಲ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಪರಶುರಾಮ ಎಫ್.ಕೆ., ಜಿಲ್ಲಾ ಕಾರ್ಯಕ್ರಮಾಧಿಕಾರಿ ಡಾ. ಕಮಲಾ ಬೈಲೂರು, ಎಲ್ಲ ತಾಲೂಕು ಪಂಚಾಯತ್‌ಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಅಧಿಕಾರಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಸಹಕಾರದ ಪಾಠ ಕಲಿತರೆ ಯಶಸ್ಸಿನ ಹಾದಿ ಸುಗಮ

## ಗಜೇಂದ್ರಗಡದಲ್ಲಿ ಸಹಕಾರ ಸಪ್ತಾಹ ಅಂಗವಾಗಿ ಕ್ವಿಜ್, ಆರೋಗ್ಯ ತಪಾಸಣಾ ಶಿಬಿರ

ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಕೇಂದ್ರ ಸಹಕಾರ ಸಚಿವಾಲಯ ಸ್ಥಾಪನೆಯ ಐದು ವರ್ಷಗಳ ಸಂಭ್ರಮದ ಅಂಗವಾಗಿ ಸಹಕಾರ ಇಲಾಖೆ, ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳ, ಗದಗ ಜಿಲ್ಲಾ ಸಹಕಾರ ಯೂನಿಯನ್, ಕೆಸಿಸಿ ಬ್ಯಾಂಕ್ ಹಾಗೂ ಧಾರವಾಡ ಹಾಲು ಒಕ್ಕೂಟದ ಸಂಯುಕ್ತ ಆಶ್ರಯದಲ್ಲಿ ಗಜೇಂದ್ರಗಡದ ಶ್ರೀ ಜಗದಂಬಾ ಕೋ–ಆಪ್ ಕ್ರೆಡಿಟ್ ಸೊಸೈಟಿ ಸಭಾಂಗಣದಲ್ಲಿ ಸಹಕಾರ ಸಪ್ತಾಹದ ಅಂಗವಾಗಿ ಸಹಕಾರ ಕ್ಷೇತ್ರ ಕುರಿತ ಕ್ವಿಜ್ ಸ್ಪರ್ಧೆ ಹಾಗೂ ಆರೋಗ್ಯ ತಪಾಸಣಾ ಶಿಬಿರ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿದ ಹಿರಿಯ ವೈದ್ಯ ಡಾ. ಆರ್.ಎಸ್. ಜೀರೆ, ವಿದ್ಯಾರ್ಥಿ ಜೀವನದಲ್ಲೇ ಸಹಕಾರದ ಮನೋಭಾವ ಬೆಳೆಸಿಕೊಳ್ಳುವುದು ಅಗತ್ಯ. ಒಗ್ಗಟ್ಟಿನಿಂದ ಕೆಲಸ ಮಾಡಿದಾಗ ನಾಯಕತ್ವ, ಶಿಸ್ತು, ಜವಾಬ್ದಾರಿ ಮತ್ತು ಪರಸ್ಪರ ಗೌರವ ಬೆಳೆಯುತ್ತದೆ. ಆರೋಗ್ಯ ಕಾಪಾಡಿಕೊಳ್ಳಲು ಜಂಕ್ ಫುಡ್‌ನಿಂದ ದೂರವಿದ್ದು ಮನೆಯ ಆಹಾರಕ್ಕೆ ಆದ್ಯತೆ ನೀಡಬೇಕು ಎಂದು



ಸಲಹೆ ನೀಡಿದರು.

ರೋಣ ಸಹಕಾರ ಅಭಿವೃದ್ಧಿ ಅಧಿಕಾರಿ ಪ್ರಶಾಂತ ಮುಧೋಳ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ತಂಡದೊಂದಿಗೆ ಕೆಲಸ ಮಾಡುವ ಸಾಮರ್ಥ್ಯವೇ ಯಶಸ್ಸಿನ ಗುಟ್ಟು. ಯುವಕರು ಸಹಕಾರ ಕ್ಷೇತ್ರದ ಬಗ್ಗೆ ಸಮಗ್ರ ಅರಿವು ಬೆಳೆಸಿಕೊಂಡು ಸಮಾಜದ ಅಭಿವೃದ್ಧಿಯಲ್ಲಿ ಪಾಲ್ಗೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಶ್ರೀ ಜಗದಂಬಾ ಕೋ–ಆಪ್ ಕ್ರೆಡಿಟ್ ಸೊಸೈಟಿ ಅಧ್ಯಕ್ಷ ವಿ.ಡಿ. ಮೇಘರಾಜ, 'ಸಹಕಾರದಿಂದ ಸಮೃದ್ಧಿ' ಎಂಬ ಧ್ಯೇಯದೊಂದಿಗೆ ಕೇಂದ್ರ ಸಹಕಾರ ಸಚಿವಾಲಯ ಸ್ಥಾಪನೆಯ ಉದ್ದೇಶವನ್ನು ವಿವರಿಸಿ, ಯುವಜನರಲ್ಲಿ ಸಹಕಾರ ಚಳವಳಿಯ ಬಗ್ಗೆ ಜಾಗೃತಿ ಮೂಡಿಸುವುದು ಅಗತ್ಯ ಎಂದು ಹೇಳಿದರು.

> ಸಹಕಾರ ಎನ್ನುವುದು ಕೇವಲ ಸಂಘ–ಸಂಸ್ಥೆಗಳಿಗಷ್ಟೇ ಸೀಮಿತವಲ್ಲ. ವಿದ್ಯಾರ್ಥಿ ಜೀವನದಲ್ಲೇ ಸಹಕಾರದ ಮನೋಭಾವ ಬೆಳೆಸಿಕೊಂಡರೆ ಉತ್ತಮ ವ್ಯಕ್ತಿತ್ವ ಮತ್ತು ಉತ್ತಮ ಸಮಾಜ ನಿರ್ಮಾಣ ಸಾಧ್ಯ.
>
> **–ಡಾ. ಆರ್.ಎಸ್. ಜೀರೆ,**
> ಹಿರಿಯ ವೈದ್ಯರು

ಕ್ವಿಜ್ ಸ್ಪರ್ಧೆಯಲ್ಲಿ ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಪಾಲ್ಗೊಂಡಿದ್ದು, ವಿಜೇತರಿಗೆ ನಗದು ಬಹುಮಾನ ಹಾಗೂ ಪಾರಿತೋಷಕ ವಿತರಿಸಲಾಯಿತು. ಇದೇ ವೇಳೆ ಡಾ. ವೆಂಕಟ ಪಂಡಿತ ನೇತೃತ್ವದಲ್ಲಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಉಚಿತ ಆರೋಗ್ಯ ತಪಾಸಣೆ ನಡೆಸಲಾಯಿತು.

# ಸನ್ಮಾರ್ಗ ಕಾಲೇಜಿನಲ್ಲಿ ಮಾದಕ ವಸ್ತುಗಳ ವಿರುದ್ಧ ಜಾಗೃತಿ



ವಿಜಯಸಾಕ್ಷಿ ಸುದ್ದಿ, ಗದಗ

ಮಾದಕ ದ್ರವ್ಯಗಳಿಂದ ದೂರ ಉಳಿಯುವುದೇ ಆರೋಗ್ಯಕರ ವ್ಯಕ್ತಿತ್ವ, ಸುಭದ್ರ ಕುಟುಂಬ ಹಾಗೂ ಸದೃಢ ಸಮಾಜ ನಿರ್ಮಾಣಕ್ಕೆ ಮೊದಲ ಹೆಜ್ಜೆಯಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅಭಿಪ್ರಾಯಪಟ್ಟರು.

ಅವರು, ನಗರದ ಸನ್ಮಾರ್ಗ ಕಾಲೇಜಿನಲ್ಲಿ ಪೊಲೀಸ್ ಇಲಾಖೆಯ ಸಹಯೋಗದಲ್ಲಿ ಆಯೋಜಿಸಿದ್ದ ಅಂತರರಾಷ್ಟ್ರೀಯ ಮಾದಕ ವಸ್ತುಗಳ ದುರುಪಯೋಗ ಮತ್ತು ಅಕ್ರಮ ಸಾಗಾಣಿಕೆ ವಿರೋಧಿ ದಿನಾಚರಣೆ ಕಾರ್ಯಕ್ರಮದಲ್ಲಿ ರಾಜ್ಯದ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಆನ್‌ಲೈನ್ ಮೂಲಕ ರಾಜ್ಯದ ಜನತೆಯನ್ನು ಉದ್ದೇಶಿಸಿ ಮಾತನಾಡಿದರು.

ಮಾದಕ ದ್ರವ್ಯ ಸೇವನೆಯನ್ನು ತ್ಯಜಿಸಿದಾಗ ಮಾತ್ರ ವ್ಯಕ್ತಿ ತನ್ನ ಕುಟುಂಬದ ಜೊತೆಗೆ ಸಮಾಜಕ್ಕೂ ಉತ್ತಮ ಬದುಕು ಕಟ್ಟಿಕೊಡಲು ಸಾಧ್ಯವಾಗುತ್ತದೆ. ಡ್ರಗ್ಸ್ ಹಾವಳಿಯನ್ನು ತಡೆಗಟ್ಟಲು ಸರ್ಕಾರ, ಗೃಹ ಇಲಾಖೆ ಮತ್ತು ಪೊಲೀಸ್ ಇಲಾಖೆ ಕ್ರಮ ಕೈಗೊಂಡಿದ್ದರೂ, ವಿದ್ಯಾರ್ಥಿಗಳು ಹಾಗೂ ಯುವಜನರ ಸಕ್ರಿಯ ಸಹಕಾರ ಅತ್ಯಗತ್ಯ ಎಂದು ಅವರು ಹೇಳಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಗದಗ ಪೊಲೀಸ್ ಇಲಾಖೆಯ ಆರ್‌ಎಸ್‌ಐ ಸಿ.ಎಸ್. ಕೆರೂರ, ಇತ್ತೀಚಿನ ದಿನಗಳಲ್ಲಿ ವಿದ್ಯಾರ್ಥಿ ಮತ್ತು ಯುವಜನರಲ್ಲಿ ಮಾದಕ ದ್ರವ್ಯ ಸೇವನೆ ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಇಂತಹ ಕೃತ್ಯಗಳಲ್ಲಿ ತೊಡಗುವವರ ವಿರುದ್ಧ ಕಾನೂನು ಪ್ರಕಾರ ಕಠಿಣ ಕ್ರಮ ಜರುಗಿಸಲಾಗುವುದು. ಕ್ಷಣಿಕ ಸುಖಕ್ಕಾಗಿ ತಮ್ಮ ಭವಿಷ್ಯವನ್ನು ಹಾಳು ಮಾಡಿಕೊಳ್ಳಬಾರದು ಎಂದು ವಿದ್ಯಾರ್ಥಿಗಳಿಗೆ ಎಚ್ಚರಿಕೆ ನೀಡಿದರು.

ಇನ್ನೋರ್ವ ಆರ್‌ಎಸ್‌ಐ ಚಾಂದ್ ಭಾಷಾ ಮಾತನಾಡಿ, ಸನ್ಮಾರ್ಗ ಕಾಲೇಜಿನ ವಿದ್ಯಾರ್ಥಿಗಳು ಸನ್ಮಾರ್ಗದಲ್ಲೇ ನಡೆದು ಸಮಾಜಕ್ಕೆ ಮಾದರಿಯಾಗಬೇಕು. ಯುವಜನರು ಡ್ರಗ್ಸ್‌ನಿಂದ ದೂರ ಉಳಿದರೆ ಮಾದಕ ವಸ್ತು ಮುಕ್ತ ಸಮಾಜ ನಿರ್ಮಾಣ ಸಾಧ್ಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಪ್ರೊ. ರಾಜೇಶ್ ಕುಲಕರ್ಣಿ, ಪ್ರಾಚಾರ್ಯ ಪ್ರೊ. ಪುನೀತ್ ದೇಶಪಾಂಡೆ, ಆಡಳಿತಾಧಿಕಾರಿ ಎಂ.ಸಿ. ಹಿರೇಮಠ, ನಿರ್ದೇಶಕರಾದ ಪ್ರೊ. ರೋಹಿತ್ ಒಡೆಯರ್, ಪ್ರೊ. ಸೈಯದ್ ಮತೀನ್ ಮುಲ್ಲಾ, ಪ್ರೊ. ರಾಹುಲ್ ಒಡೆಯರ್, ಉಪನ್ಯಾಸಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಸಹಕಾರ ಸಂಘಗಳ ಸಮಾಪನೆಗೆ ಪ್ರಕ್ರಿಯೆ ಆರಂಭ

ವಿಜಯಸಾಕ್ಷಿ ಸುದ್ದಿ, ಗದಗ

ರೋಣ ತಾಲೂಕಿನ ಬೆಳವಣಕಿ ಗ್ರಾಮದ ಹಾಲು ಉತ್ಪಾದಕರ ಮಹಿಳಾ ಸಹಕಾರ ಸಂಘ ಹಾಗೂ ಸೃಜನಶೀಲ ಕೋ–ಆಪ್ ಕ್ರೆಡಿಟ್ ಸೊಸೈಟಿ ಹಲವು ವರ್ಷಗಳಿಂದ ಯಾವುದೇ ಚಟುವಟಿಕೆ ನಡೆಸದೆ ಸ್ಥಗಿತಗೊಂಡಿರುವ ಹಿನ್ನೆಲೆಯಲ್ಲಿ ಎರಡೂ ಸಂಘಗಳ ಸಮಾಪನೆ ಪ್ರಕ್ರಿಯೆ ಆರಂಭಿಸಲಾಗಿದೆ.

ಸಹಕಾರ ಸಂಘಗಳ ಉಪನಿಬಂಧಕರು ಸಮಾಪನಾ ಆದೇಶ ಹೊರಡಿಸಿದ್ದು, ಸಮಾಪನಾಧಿಕಾರಿಯನ್ನು ನೇಮಕ ಮಾಡಲಾಗಿದೆ. ಸಂಘಗಳು ತಮ್ಮ ಬೈಲಾದಲ್ಲಿರುವ ಉದ್ದೇಶಗಳಂತೆ ಕಾರ್ಯನಿರ್ವಹಿಸದೆ ದೀರ್ಘಕಾಲದಿಂದ ನಿಷ್ಕ್ರಿಯವಾಗಿರುವ ಕಾರಣ ಈ ಕ್ರಮ ಕೈಗೊಳ್ಳಲಾಗಿದೆ.

ಪ್ರಸ್ತುತ ಈ ಎರಡೂ ಸಂಘಗಳು ನೋಂದಾಯಿತ ವಿಳಾಸಗಳಲ್ಲಿ ಕಾರ್ಯನಿರ್ವಹಿಸುತ್ತಿಲ್ಲ. ಅಲ್ಲದೆ ಆಡಳಿತ ಮಂಡಳಿ ಸದಸ್ಯರು ಹಾಗೂ ಕಾರ್ಯದರ್ಶಿಗಳ ಕುರಿತು ಮಾಹಿತಿ ಲಭ್ಯವಿಲ್ಲ. ಹೀಗಾಗಿ ಸಂಘಗಳಿಗೆ ಯಾರಾದರೂ ಹಣ ಪಡೆಯಬೇಕಿದ್ದರೂ ಅಥವಾ ಸಂಘಕ್ಕೆ ಹಣ ನೀಡಬೇಕಿದ್ದರೂ, ಸಂಬಂಧಿತ ಮೂಲ ದಾಖಲೆಗಳೊಂದಿಗೆ ಪ್ರಕಟಣೆ ಹೊರಬಿದ್ದ ದಿನದಿಂದ ಏಳು ದಿನಗಳೊಳಗೆ ಸಮಾಪನಾಧಿಕಾರಿ ಪ್ರಕಾಶ ಎಸ್. ಹಳ್ಳಿ, ಪ್ರಭಾರ ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರ ಕಚೇರಿ, ಕೊಠಡಿ ಸಂಖ್ಯೆ 125, ಜಿಲ್ಲಾಡಳಿತ ಭವನ, ಹುಬ್ಬಳ್ಳಿ ರಸ್ತೆ, ಗದಗ ಅವರನ್ನು ಸಂಪರ್ಕಿಸುವಂತೆ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ನಿಗದಿತ ಅವಧಿಯಲ್ಲಿ ಯಾವುದೇ ಆಕ್ಷೇಪಣೆ ಸಲ್ಲಿಕೆಯಾಗದಿದ್ದರೆ, ಎರಡೂ ಸಂಘಗಳಿಗೆ ಸಂಬಂಧಿಸಿದ ಯಾವುದೇ ಹಕ್ಕು–ಬಾಧ್ಯತೆಗಳಿಲ್ಲ ಎಂದು ಪರಿಗಣಿಸಿ ನಿಯಮಾನುಸಾರ ನೋಂದಣಿ ರದ್ದುಗೊಳಿಸುವ ಪ್ರಕ್ರಿಯೆ ಪೂರ್ಣಗೊಳಿಸಲಾಗುವುದು. ನಂತರ ಸಲ್ಲಿಕೆಯಾಗುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಪ್ರಕಟಣೆಯಲ್ಲಿ ಎಚ್ಚರಿಸಲಾಗಿದೆ.

# ತೃಪ್ತಿಯೇ ನಿಜವಾದ ಶ್ರೀಮಂತಿಕೆ

## 74ನೇ ಶಿವಾನುಭವಗೋಷ್ಠಿಯಲ್ಲಿ ಮುಪ್ಪಿನ ಬಸವಲಿಂಗ ಶ್ರೀಗಳ ಸಂದೇಶ



ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜೀವನವನ್ನು ಸಾರ್ಥಕವಾಗಿ ಬದುಕುವುದು ಒಂದು ಕಲೆ. ಶ್ರದ್ಧೆ, ಪರಿಶ್ರಮ ಮತ್ತು ತೃಪ್ತಿಯ ಮನೋಭಾವದಿಂದ ಬದುಕನ್ನು ರೂಪಿಸಿಕೊಂಡರೆ ಅದು ಸದಾ ಸುಂದರವಾಗಿರುತ್ತದೆ ಎಂದು ಮುಪ್ಪಿನ ಬಸವಲಿಂಗ ಸ್ವಾಮೀಜಿ ಹೇಳಿದರು.

ಪಟ್ಟಣದ ಶ್ರೀ ಅನ್ನದಾನೇಶ್ವರ ಮಂಟಪದಲ್ಲಿ ಅಕ್ಷರ ಭಾರತ ಪ್ರತಿಷ್ಠಾನ, ಗದಗ ಹಾಗೂ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿ, ನರೇಗಲ್ಲ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ 74ನೇ ಶಿವಾನುಭವಗೋಷ್ಠಿಯ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಸಮಾಧಾನ ಮತ್ತು ಸಂತೋಷದಿಂದ ಬದುಕುವುದೇ ನಿಜವಾದ ಶ್ರೀಮಂತಿಕೆ. ಇದ್ದುದರಲ್ಲಿ ತೃಪ್ತಿ ಹೊಂದಿದರೆ ಬದುಕು ನೆಮ್ಮದಿಯಾಗುತ್ತದೆ. ಆಸೆಗಳಿಗೆ ಮಿತಿ ಇಲ್ಲ; ಅವುಗಳ ಹಿಂದೆ ಹೋದರೆ ಅಸಮಾಧಾನ ಮತ್ತು ದುಃಖವೇ ಹೆಚ್ಚಾಗುತ್ತದೆ. ಆದ್ದರಿಂದ ಪ್ರತಿಯೊಬ್ಬರೂ ಉದಾತ್ತ ಚಿಂತನೆ ಬೆಳೆಸಿಕೊಂಡು ತೃಪ್ತಿಯ ಜೀವನ ರೂಢಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

"ಶ್ರದ್ಧೆ, ಪರಿಶ್ರಮದಿಂದ ಸಾಧನೆ ಸಾಧ್ಯ" ಎಂಬ ವಿಷಯದ ಕುರಿತು ವಿಶೇಷ ಉಪನ್ಯಾಸ ನೀಡಿದ ನಿವೃತ್ತ ಪ್ರಾಚಾರ್ಯ ಬಸವರಾಜ ಜಾಲೀಹಾಳ, ವಿದ್ಯಾರ್ಥಿಗಳು ಗುರಿ ಸಾಧಿಸುವ ಛಲ ಬೆಳೆಸಿಕೊಳ್ಳಬೇಕು. ಶ್ರದ್ಧೆ ಮತ್ತು ಪರಿಶ್ರಮ ಇದ್ದರೆ ಯಶಸ್ಸು ನಿಶ್ಚಿತ. ಅಹಂಕಾರವನ್ನು ತೊರೆದು ವಿನಯದಿಂದ ಬದುಕಿದಾಗ ಮಾತ್ರ ಉನ್ನತ ವ್ಯಕ್ತಿತ್ವ ರೂಪುಗೊಳ್ಳುತ್ತದೆ. ದೊರೆತಿರುವ ಅವಕಾಶಗಳನ್ನು ಸದ್ಬಳಕೆ ಮಾಡಿಕೊಂಡು ಭವಿಷ್ಯವನ್ನು ಉಜ್ವಲಗೊಳಿಸಬೇಕು ಎಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಪ್ರಾಚಾರ್ಯ ಎಸ್.ಜಿ. ಕೇಶಣ್ಣವರ, ಮುಖ್ಯಶಿಕ್ಷಕ ಎಂ.ಬಿ. ಸಜ್ಜನ, ಸಂಗಯ್ಯ ಪ್ರಭುಸ್ವಾಮಿಮಠ, ಡಾ. ಎಲ್.ಎಸ್. ಗೌರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಡಾ. ರಾಜೇಂದ್ರಕುಮಾರ ಅಂಗಡಿ, ಯರೆಹಂಚಿನಾಳದ ಈಶಪ್ಪ ಚಿತ್ತವಾಡಗಿ ದಂಪತಿ, ಉಪನ್ಯಾಸಕ ಅಮಿತಕುಮಾರ ಟೆಂಗಿನಕಾಯಿ, ಮುಖ್ಯಶಿಕ್ಷಕ ಮಂಜುನಾಥ ಹಳ್ಳಿ ಹಾಗೂ ಶಿಕ್ಷಕ ಶ್ರೀಶೈಲ ಬಂಡಿಹಾಳ ಅವರನ್ನು ಶ್ರೀಗಳು ಗೌರವ ರಕ್ಷೆ ನೀಡಿ ಸನ್ಮಾನಿಸಿದರು.

ಶ್ರೀದೇವಿ ಕೊಂಡಿಕೊಪ್ಪ ಮತ್ತು ತಂಡ ಪ್ರಾರ್ಥಿಸಿದರು. ಕೃಷಿತಜ್ಞ ವೀರೇಶ ನೇಗಲಿ ಸ್ವಾಗತಿಸಿದರು. ಡಾ. ಕಲ್ಲಯ್ಯ ಹಿರೇಮಠ ಹಾಗೂ ಎಫ್.ಎನ್. ಹುಡೇದ ಕಾರ್ಯಕ್ರಮ ನಿರೂಪಿಸಿದರು. ಮುಖ್ಯಶಿಕ್ಷಕ ಸಂಗಮೇಶ ಹೂಲಗೇರಿ ವಂದಿಸಿದರು.

# ಹಳೆಯ ಪಿಂಚಣಿ ಜಾರಿಗೆ ಆಗ್ರಹಿಸಿ ನಾಳೆ ಬೃಹತ್ ಪ್ರತಿಭಟನೆ

ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ಹಳೆಯ ಪಿಂಚಣಿ ಯೋಜನೆ (ಒಪಿಎಸ್) ಮರುಜಾರಿಗೆ ಆಗ್ರಹಿಸಿ ಜುಲೈ 4ರಂದು ಪಟ್ಟಣದಲ್ಲಿ ಬೃಹತ್ ಪ್ರತಿಭಟನೆ ಹಾಗೂ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಕರ್ನಾಟಕ ರಾಜ್ಯ ಮಾಧ್ಯಮಿಕ ಶಾಲಾ ನೌಕರರ ಸಂಘದ ಅಧ್ಯಕ್ಷ ಎಲ್.ಎಸ್. ಅರಳಹಳ್ಳಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಅಂದು ಮಧ್ಯಾಹ್ನ 1 ಗಂಟೆಗೆ ತಾಯಿ ಪಾರ್ವತಿ ಮಕ್ಕಳ ಬಳಗದ ಸಭಾಂಗಣದಲ್ಲಿ ಸಮಾವೇಶ ನಡೆಯಲಿದ್ದು, ಬಳಿಕ ನೂರಾರು ನೌಕರರು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಪಾದಯಾತ್ರೆ ನಡೆಸಿ ತಹಸೀಲ್ದಾರ್ ಕಚೇರಿಗೆ ತೆರಳಿ ಸರ್ಕಾರಕ್ಕೆ ಮನವಿ ಸಲ್ಲಿಸಲಿದ್ದಾರೆ ಎಂದು ಹೇಳಿದರು.

2006ರ ನಂತರ ನೇಮಕಗೊಂಡ ನೌಕರರಿಗೆ ಹೊಸ ಪಿಂಚಣಿ ಯೋಜನೆ (ಎನ್‌ಪಿಎಸ್) ಜಾರಿಗೊಳಿಸಲಾಗಿದ್ದು, ಅದನ್ನು ಆರಂಭದಿಂದಲೇ ಬಹುತೇಕ ನೌಕರರು ವಿರೋಧಿಸುತ್ತಿದ್ದಾರೆ. 2006ರ ನಂತರ ನೇಮಕಗೊಂಡ ಅನುದಾನಿತ ನೌಕರರ ಬಹುದಿನಗಳ ಬೇಡಿಕೆಯಾಗಿರುವ ಹಳೆಯ ಪಿಂಚಣಿ ಯೋಜನೆ ಮರುಜಾರಿಗೊಳಿಸುವಂತೆ ಜಿಲ್ಲೆ ಹಾಗೂ ರಾಜ್ಯ ಮಟ್ಟದಲ್ಲಿ ಹಲವು ಬಾರಿ ಹೋರಾಟ ನಡೆದರೂ ಸರ್ಕಾರ ಸ್ಪಂದಿಸಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಈ ಹಿನ್ನೆಲೆಯಲ್ಲಿ ಒಪಿಎಸ್ ಜಾರಿಗೆ ಒತ್ತಾಯಿಸಿ ಜುಲೈ 4ರಂದು ನಡೆಯುವ ಬೃಹತ್ ಪ್ರತಿಭಟನೆ ಹಾಗೂ ಸಮಾವೇಶದಲ್ಲಿ ಅನುದಾನಿತ ನೌಕರರು ಸೇರಿದಂತೆ ಎಲ್ಲ ಇಲಾಖೆ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಹೋರಾಟವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದರು. ಪ್ರತಿಭಟನೆಯ ನಂತರ ನಡೆಯುವ ಸಮಾವೇಶದಲ್ಲಿ ಹಳೆಯ ಪಿಂಚಣಿ ಯೋಜನೆ ಕುರಿತು ಸಮಗ್ರ ಚರ್ಚೆ ನಡೆಯಲಿದ್ದು, ವಿವಿಧ ಸಂಘಟನೆಗಳ ಮುಖಂಡರು ಹಾಗೂ ಪ್ರಮುಖರು ನೌಕರರಿಗೆ ಮಾಹಿತಿ ನೀಡಲಿದ್ದಾರೆ ಎಂದು ಎಲ್.ಎಸ್. ಅರಳಹಳ್ಳಿ ತಿಳಿಸಿದ್ದಾರೆ.

# 'ಆರೋಗ್ಯವೇ ಭಾಗ್ಯ' ಸಾರಿದ ಕೆಎಲ್‌ಇ ವಿದ್ಯಾರ್ಥಿಗಳ ನಾಟಕ

## ವೈದ್ಯರ ದಿನಾಚರಣೆಗೆ ಅರ್ಥಪೂರ್ಣ ಮೆರುಗು; ರಸ್ತೆ ಸುರಕ್ಷತೆ, ಪ್ರಥಮ ಚಿಕಿತ್ಸೆ ಮತ್ತು ಆರೋಗ್ಯ ಜಾಗೃತಿಯ ಸಂದೇಶ ಸಾರಿದ ವಿದ್ಯಾರ್ಥಿಗಳು

ವಿಜಯಸಾಕ್ಷಿ ಸುದ್ದಿ, ಗದಗ

ರಾಷ್ಟ್ರೀಯ ವೈದ್ಯರ ದಿನಾಚರಣೆಯನ್ನು ಸ್ಥಳೀಯ ಕೆಎಲ್‌ಇ ಶಾಲೆಯಲ್ಲಿ ವಿದ್ಯಾರ್ಥಿಗಳೇ ಕೇಂದ್ರಬಿಂದುವಾಗಿ ಅರ್ಥಪೂರ್ಣವಾಗಿ ಆಚರಿಸಿದರು. ಭಾಷಣ, ನಾಟಕ, ನೃತ್ಯ ಹಾಗೂ ಜಾಗೃತಿ ಗೀತೆಗಳ ಮೂಲಕ ಆರೋಗ್ಯದ ಮಹತ್ವವನ್ನು ಸಾರಿದ ವಿದ್ಯಾರ್ಥಿಗಳು ಕಾರ್ಯಕ್ರಮಕ್ಕೆ ವಿಶೇಷ ಮೆರುಗು ತಂದರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿದ್ದ ನಗರದ ಹಿರಿಯ ವೈದ್ಯ ಡಾ. ರಾಜಶೇಖರ ಪವಾಡಶೆಟ್ಟರ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ರಸ್ತೆ ಅಪಘಾತಗಳು ಹೆಚ್ಚಾಗುತ್ತಿರುವುದು ಕಳವಳಕಾರಿ. ವಾಹನ ಸಂಚಾರದಲ್ಲಿ ಎಚ್ಚರಿಕೆ ವಹಿಸುವುದು ಪ್ರತಿಯೊಬ್ಬರ ಜವಾಬ್ದಾರಿ. ಅಪಘಾತ




ಸಂಭವಿಸಿದಾಗ ಗಾಯಾಳುಗಳಿಗೆ ತಕ್ಷಣ ಪ್ರಥಮ ಚಿಕಿತ್ಸೆ ನೀಡಿ ಆಸ್ಪತ್ರೆಗೆ ದಾಖಲಿಸುವ ಮೂಲಕ ಮಾನವೀಯತೆ ಮೆರೆಯಬೇಕು ಎಂದು ಸಲಹೆ ನೀಡಿದರು.

ವೈದ್ಯರು ತಮ್ಮ ಜ್ಞಾನ, ಕೌಶಲ್ಯ ಮತ್ತು ಮಾನವೀಯತೆಯ ಮೂಲಕ ಸಮಾಜದ ಅಮೂಲ್ಯ ಸೇವೆ ಸಲ್ಲಿಸುತ್ತಿದ್ದಾರೆ. ಸಾಂಕ್ರಾಮಿಕ ರೋಗಗಳು ಹಾಗೂ ತುರ್ತು ಪರಿಸ್ಥಿತಿಗಳಲ್ಲಿ ಅವರ ಸೇವೆ ಅತ್ಯಂತ ಶ್ಲಾಘನೀಯವಾಗಿದೆ ಎಂದು ಅವರು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಶಾಲೆಯ ಪ್ರಾಂಶುಪಾಲೆ ಕಲ್ಪನಾ ಚಚಡಿ ಮಾತನಾಡಿ, ಪ್ರಕೃತಿಯು ನೀಡಿರುವ ಗಾಳಿ, ನೀರು, ಬೆಳಕು ಹಾಗೂ ಆಹಾರವೇ ಆರೋಗ್ಯದ ಮೂಲ. ಅವುಗಳನ್ನು ಸಂರಕ್ಷಿಸುವ ಜವಾಬ್ದಾರಿ ಪ್ರತಿಯೊಬ್ಬರ ಮೇಲಿದೆ. ಕೊರೊನಾ ಮಹಾಮಾರಿಯ ಸಂದರ್ಭದಲ್ಲಿ ವೈದ್ಯರು ಸಲ್ಲಿಸಿದ ಸೇವೆ ಸದಾ ಸ್ಮರಣೀಯ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ 3 ಮತ್ತು 4ನೇ ತರಗತಿ ವಿದ್ಯಾರ್ಥಿಗಳು "ಆರೋಗ್ಯವೇ ಭಾಗ್ಯ" ಎಂಬ ಜಾಗೃತಿ ನಾಟಕ ಪ್ರದರ್ಶಿಸಿ ಆರೋಗ್ಯಕರ ಜೀವನಶೈಲಿಯ ಸಂದೇಶ ನೀಡಿದರು. 7 ಮತ್ತು 8ನೇ ತರಗತಿ ವಿದ್ಯಾರ್ಥಿಗಳು ದೈನಂದಿನ ಬದುಕಿನಲ್ಲಿ ಆರೋಗ್ಯದ ಕಾಳಜಿ ಕುರಿತು ಅಣಕು ಪ್ರದರ್ಶನ ನಡೆಸಿ ಮೆಚ್ಚುಗೆ ಗಳಿಸಿದರು.

ವೇದಿಕೆಯಲ್ಲಿ ಹಿರಿಯ ಶಿಕ್ಷಕ ವಿರೇಂದ್ರ ಗಂಗಲ್ ಉಪಸ್ಥಿತರಿದ್ದರು. ವಿಜ್ಞಾನ ವಿಭಾಗದ ಮುಖ್ಯಸ್ಥೆ ಸುರೇಖಾ ಕದಂ, ಶಿಕ್ಷಕರಾದ ಮಹಾಂತೇಶ ಕಟಗಿ ಹಾಗೂ ಶಿಕ್ಷಕಿಯರಾದ ಸೀತಾ ನಾಮಧಾರಿ, ವಿಜಯಾ ಕಬ್ಬಕ್ಕಿ, ಸೋನಲ್ ಶಹಾ, ಸೋನಿಯಾ ಉಣಚಗೇರಿ, ನಮ್ರತಾ, ಸಮ್ರಿನ್ ತಾಜ್, ಬೃಂದಾ ಕೆ. ಮತ್ತು ಪ್ರೇಮಾಂಜಲಿ ಕಾರ್ಯಕ್ರಮದ ನೇತೃತ್ವ ವಹಿಸಿದ್ದರು. ವಂದನಾರ್ಪಣೆ ಹಾಗೂ ರಾಷ್ಟ್ರಗೀತೆಯೊಂದಿಗೆ ಕಾರ್ಯಕ್ರಮ ಮುಕ್ತಾಯವಾಯಿತು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka